# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 58 | ಆರ್‌ಎನ್‌ಐ ನಂ: ಕೆಎಆರ್‌ಕೆಎಎನ್/2023/88462 | ಚಿತ್ರದುರ್ಗ | ದಿನಾಂಕ: 14–09–2024 ಶನಿವಾರ | ಪುಟ: 4 | ಬೆಲೆ : ರೂ.2–00
Volume - 02 Issue - 58 | RNI No: KARKAN/2023/88462 | Chitradurga | Date: 14-09-2024 Saturday | Page: 4 | Price: Rs. 2-00



ಒಳಪುಟದ ಸುದ್ದಿಗಳು

ವಿಶ್ಲೇಷಣೆಯಿಂದ ಮಾತ್ರ ಸಮಸ್ಯೆಗಳಿಗೆ ಪರಿಹಾರ; ಅನಂತರಾಮ್ ಗೌತಮ್ 2

ಮಕ್ಕಳಲ್ಲಿ ಅಪೌಷ್ಠಿಕತೆ; ಸುಧಾರಿತ ಪೌಷ್ಠಿಕತೆಯಲ್ಲಿ ತೊಡಗಿಸಿ 3

ಮಾಧ್ಯಮಗಳು ವಾಸ್ತವ ಸಂಗತಿ ಜನರಿಗೆ ಮುಟ್ಟಿಸುವ ಕೆಲಸ ಮಾಡಲಿ: ಸಚಿವ 4



ಸುದ್ದಿ, ಜಾಹಿರಾತಿಗೆ 9686622252


## ಫಾಸ್ಟ್ ನ್ಯೂಸ್

### ಸೆ.15 ರಂದು ರಾಷ್ಟ್ರೀಯ ಹೆದ್ದಾರಿ ಎಡಭಾಗದಲ್ಲಿ ಸಂಚಾರ ನಿರ್ಬಂಧ

» ಚಿತ್ರದುರ್ಗ

ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಹಿನ್ನೆಲೆಯಲ್ಲಿ ಸೆ.15 ರಂದು ಮೊಳಕಾಲ್ಮೂರು, ಚಳ್ಳಕೆರೆ ಹಾಗೂ ಹಿರಿಯೂರು ಮಾರ್ಗದಲ್ಲಿ ಸು.140 ಕಿ.ಮೀ ಮಾನವ ಸರಪಳಿ ನಿರ್ಮಿಸುವ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿದೆ. ಕಾರ್ಯಕ್ರಮದಲ್ಲಿ ವಿದ್ಯಾರ್ಥಿಗಳು, ಶಿಕ್ಷಕರು, ಸ್ವ-ಸಹಾಯ ಸಂಘಗಳ ಸದಸ್ಯರು, ಆಶಾ ಹಾಗೂ ಅಂಗನವಾಡಿ ಕಾರ್ಯಕರ್ತೆಯರು ಸಾವಿರಾರು ಸಂಖ್ಯೆಯಲ್ಲಿ ಭಾಗವಹಿಸಲಿದ್ದಾರೆ. ಮಾನವ ಸರಪಳಿ ರಚನೆಯನ್ನು ಮೊಳಕಾಲ್ಮೂರು ತಾಲ್ಲೂಕಿನ ತಮ್ಮೇನಹಳ್ಳಿ ಗೇಟ್‌ನಿಂದ, ಹಿರಿಯೂರು ನಗರದ ಟಿ.ಬಿ.ವೃತ್ತದವರಗೆ ಹಾದು ಹೋಗಿರುವ ರಾಷ್ಟ್ರೀಯ ಹೆದ್ದಾರಿ 150(ಎ) ಹಾಗೂ ಹಿರಿಯೂರು ನಗರದ ಟಿ.ಬಿ ವೃತ್ತದಿಂದ ಜೆ.ಜೆ. ಹಳ್ಳಿ ಬಾರ್ಡರ್ ವರೆಗೆ ಹಾದು ಹೋಗಿರುವ ರಾಷ್ಟ್ರೀಯ ಹೆದ್ದಾರಿ 48 ರಸ್ತೆಗಳ ಎಡಭಾಗದಲ್ಲಿ ನಿರ್ಮಾಣ ಮಾಡಲಾಗುವುದು. ಈ ಕಾರಣದಿಂದ ಸಾರ್ವಜನಿಕರ ಸುರಕ್ಷತೆ, ವಾಹನ ಸುಗಮ ಸಂಚಾರದ ದೃಷ್ಠಿಯಿಂದ ಮೊಳಕಾಲ್ಮೂರು, ಚಳ್ಳಕೆರೆ ಹಾಗೂ ಹಿರಿಯೂರು ಮಾರ್ಗದ ಮೂಲಕ ಹಾದು ಹೋಗಿರುವ ರಾಷ್ಟ್ರೀಯ ಹೆದ್ದಾರಿಗಳಲ್ಲಿ ಸೆ.15 ರಂದು ಬೆಳಿಗ್ಗೆ 7 ಗಂಟೆಯಿಂದ ಮಧ್ಯಾಹ್ನ 12 ಗಂಟೆಗಯವರೆಗೆ ಎಡ ಭಾಗದಲ್ಲಿ ಎಲ್ಲಾ ರೀತಿಯ ವಾಹನ ಸಂಚಾರವನ್ನು ನಿರ್ಬಂಧಿಸಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಆದೇಶಿಸಿದ್ದಾರೆ.

### ಸೆ.14ರಂದು ಸ್ವಚ್ಛತಾ ಹೀ ಸೇವಾ ಪ್ರಾಕ್ಷಿಕ ಕಾರ್ಯಕ್ರಮ

» ಚಿತ್ರದುರ್ಗ

ಚಿತ್ರದುರ್ಗ ನಗರಸಭೆ ಸಭಾಂಗಣದಲ್ಲಿ ಸೆ.14 ರಂದು ಬೆಳಿಗ್ಗೆ 10.30ಕ್ಕೆ ಸ್ವಚ್ಛತಾ ಹೀ ಸೇವಾ ಪ್ರಾಕ್ಷಿಕ–2024 ಉದ್ಘಾಟನಾ ಸಮಾರಂಭ ಹಮ್ಮಿಕೊಳ್ಳಲಾಗಿದೆ. ಸೆ.14 ರಿಂದ ಅ.02ರವರೆಗೆ 'ಸ್ವಚ್ಛತೆಯ ಸಹಭಾಗಿತ್ವ ಮತ್ತು ಸ್ವಚ್ಛತೆ ಸೇವೆ ಒಂದೇ ನಮ್ಮ ಗುರಿ' ಎಂಬ ಶೀರ್ಷಿಕೆಯಡಿ ನಗರದಾದ್ಯಂತ ಶ್ರಮದಾನ, ಆಂದೋಲನ ಸಫಾಯಿಮಿತ್ರ ಸುರಕ್ಷಾ ಶಿಬಿರ, ಶಾಲಾ ಕಾಲೇಜು ವಿದ್ಯಾರ್ಥಿಗಳು ಹಾಗೂ ಬೀದಿಬದಿ, ವಾಣಿಜ್ಯ ಪ್ರದೇಶದ ವ್ಯಾಪಾರಸ್ಥರಿಗೆ ಏಕಬಳಿಕೆ ಪ್ಲಾಸ್ಟಿಕ್ ಸ್ವಚ್ಛತೆ ಅರಿವು, ಕಸ ವಿಲೇವಾರಿ ಬಗ್ಗೆ ಅರಿವು ಮೂಡಿಸಲಾಗುವುದು. ಉದ್ಘಾಟನೆ ಸಮಾರಂಭದಲ್ಲಿ ಸಚಿವರು, ಶಾಸಕರು, ನಗರಸಭೆ ಅಧ್ಯಕ್ಷರು, ಸದಸ್ಯರು, ಇತರೆ ಗಣ್ಯರು, ನಗರದಲ್ಲಿನ ಎನ್.ಜಿ.ಓ, ಆರ್.ಡಬ್ಲ್ಯೂ.ಎ ಹಾಗೂ ಸ್ವಯಂ ಸೇವಾ ಸಂಘ ಸಂಸ್ಥೆಗಳು ಪಾಲ್ಗೊಳ್ಳಲಿವೆ. ಸಾರ್ವಜನಿಕರು, ನಾಗರಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ನಗರಸಭೆ ಪೌರಾಯುಕ್ತೆ ಎಂ.ರೇಣುಕಾ ತಿಳಿಸಿದ್ದಾರೆ.

### ಎಸ್.ಜೆ.ಎಂ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಪೋಷಣ್ ಮಾಸಾಚರಣೆ ಕಾರ್ಯಾಗಾರ

» ದಾವಣಗೆರೆ

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಿಂದ ಪೋಷಣ್‌ಅಭಿಯಾನಯೋಜನೆಯಡಿಸೆಪ್ಟೆಂಬರ್ 12 ರಂದು ನಗರದ ಎಸ್.ಜೆ.ಎಂ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಪೋಷಣ್ ಮಾಸಾಚರಣೆ ಅಂಗವಾಗಿ ಕಾರ್ಯಗಾರ ಏರ್ಪಡಿಸಲಾಯಿತು. ಕಾರ್ಯಗಾರದ ಉದ್ಘಾಟನೆಯನ್ನು ಶಿಶು ಅಭಿವೃದ್ಧಿ ಸಹಾಯಕ ಯೋಜನಾಧಿಕಾರಿ ಪ್ರಿಯದರ್ಶಿನಿ ನೆರವೇರಿಸಿದರು. ಸಹ ಶಿಕ್ಷಕರಾದ ವಿಜಯ್ ಕುಮಾರ್ ಇವರು ಮಾತನಾಡುತ್ತಾ ಪರಿಸರ ಸ್ವಚ್ಛತೆ ಹಾಗೂ ಸರ್ಕಾರಿ ಶಾಲೆಯ ಸೌಲಭ್ಯಗಳ ಬಗ್ಗೆ ಸವಿಸ್ತಾರವಾಗಿ ತಿಳಿಸಿ ವಿವಿಧ ಆಹಾರ ಪದಾರ್ಥಗಳನ್ನು ತಯಾರಿಸಿದಂತಹ ಪೌಷ್ಠಿಕತೆ ಅಂಶವುಳ್ಳ ಪದಾರ್ಥಗಳ ಪದರ್ಶನವನ್ನು ಏರ್ಪಡಿಸಲಾಗಿತ್ತು, ಕಾರ್ಯಕ್ರಮದಲ್ಲಿ ಮಕ್ಕಳ ರಕ್ಷಣಾ ಘಟಕ ಆಧಿಕಾರಿ ಹೀರಾನಾಯ್ಕ, ಶಾಲೆಯ ಮುಖ್ಯೋಪಾಧ್ಯಾಯರಾದ ಸಿದ್ದೇಶ್ ಎನ್.ಇ., ಸಹ ಶಿಕ್ಷಕಿ ಪುಷ್ಪಲತಾ, ಮೇಲ್ವಿಚಾರಕರಾದ ಸುಧಾ, ಗರ್ಭಿಣಿಯರು, ಫಲಾನುಭವಿಗಳು, ಸ್ತ್ರೀ ಶಕ್ತಿ ಸಂಘದ ಸದಸ್ಯರು, ಪೋಷಣ್ ಕೋ ಆರ್ಡಿನೇಟರ್,ಅಂಗನವಾಡಿಕಾರ್ಯಕರ್ತೆಯರು, ಸಹಾಯಕಿಯರು ಭಾಗವಹಿಸಿದ್ದರು.

ಸೆ. 15 ರಂದು ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ– ಪತ್ರಿಕಾಗೋಷ್ಠಿಯಲ್ಲಿ ಜಿಲ್ಲಾಧಿಕಾರಿ ಟಿ.ವೆಂಕಟೇಶ್ ಮಾಹಿತಿ

# ರಾಜ್ಯದಲ್ಲಿಯೇ ಚಿತ್ರದುರ್ಗ ಜಿಲ್ಲೆಯಲ್ಲಿ ಅತೀ ಉದ್ದದ ಮಾನವ ಸರಪಳಿ ರಚನೆಯಾಗಲಿದೆ

» ಚಿತ್ರದುರ್ಗ



ಅಂತರ ರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಇದೇ ಸೆ.15 ರಂದು ರಾಜ್ಯದಲ್ಲಿ ನಿರ್ಮಾಣ ಮಾಡುತ್ತಿರುವ ಮಾನವ ಸರಪಳಿ ವಿಶ್ವದಾಖಲೆಯಾಗಲಿದೆ. ಅಂದು ಜಿಲ್ಲೆಯಲ್ಲಿ ನಿರ್ಮಿಸುತ್ತಿರುವ 145 ಕಿ.ಮೀ ಉದ್ದದ ಮಾನವ ಸರಪಳಿ ರಾಜ್ಯದ ಇತರೆ ಜಿಲ್ಲೆಗಳ ಪೈಕಿ ಚಿತ್ರದುರ್ಗ ಅತೀ ಉದ್ದದ ಮಾನವ ಸರಪಳಿಯಾಗಿದ್ದು, ಅಂದಾಜು 1.50 ಲಕ್ಷ ಜನರು ಭಾಗವಹಿಸಲಿದ್ದಾರೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಶುಕ್ರವಾರ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಸಂಬಂಧ ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಅವರು ಮಾತನಾಡಿದರು.

ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಅತೀ ಉದ್ದದ ಮಾನವಸರಪಳಿರಚನೆಮಾಡುವಮೂಲಕ ವಿಶೇಷವಾಗಿ ಆಚರಿಸಲಾಗುತ್ತಿದ್ದು, ಜತೆಗೆ ಸಸಿ ನೆಡುವ ಕಾರ್ಯಕ್ರಮ ಆಯೋಜನೆಗೆ ಅರಣ್ಯ ಇಲಾಖೆ ಸಿದ್ಧತೆ ಮಾಡಿಕೊಂಡಿದೆ ಎಂದು ಹೇಳಿದರು.

ಅಂತರ ರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಸೆ.15ರಂದು ಬೆಳಿಗ್ಗೆ 9.30 ರಿಂದ 10.30 ರವರೆಗೆ ಮಾನವ ಸರಪಳಿ ನಿರ್ಮಾಣ ಮಾಡಲಾಗುವುದು. ಕರ್ನಾಟಕ ಉತ್ತರ ತುದಿಯಿಂದ ದಕ್ಷಿಣ ತುದಿಯವರೆಗೆ ಅಂದರೆ ಬೀದರ್‌ನಿಂದ ಚಾಮರಾಜನಗರವರೆಗೆ ರಾಜ್ಯದ ಎಲ್ಲ ಜಿಲ್ಲೆಗಳು ಸಂಪರ್ಕ ಕಲ್ಪಿಸುವ ರೀತಿಯಲ್ಲಿ ಸುಮಾರು 25 ಲಕ್ಷ ಜನರು ಮಾನವ ಸರಪಳಿ ರಚಿಸುವ ಮೂಲಕ ಆಚರಿಸಲು ಸರ್ಕಾರ ನಿರ್ಧರಿಸಿದೆ. ಪ್ರಜಾಪ್ರಭುತ್ವವು ಸಮಾನತೆ, ಸ್ವಾತಂತ್ರ್ಯ ಮತ್ತು ಭಾತೃತ್ವದ ಆದರ್ಶಗಳು ಭಾರತೀಯ ಸಂವಿಧಾನ ಪೀಠಿಕೆಯ ಭಾಗ. ಪ್ರಜಾಪ್ರಭುತ್ವದ ಅಂಶಗಳನ್ನು ಪ್ರತಿಯೊಬ್ಬರಿಗೂ ಮುಟ್ಟಿಸುವ ಕಾಳಜಿಯಿಂದ ಮಾನವ ಸರಪಳಿ ನಿರ್ಮಾಣ ಮಾಡುವ ಮೂಲಕ ಪ್ರಜಾಪ್ರಭುತ್ವ ಮೌಲ್ಯ ಗೌರವಿಸುವಂತಹ ವಿಭಿನ್ನ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ಹೇಳಿದರು.

ಜಿಲ್ಲೆಯ ಗಡಿಭಾಗ ಮೊಳಕಾಲ್ಮುರು ತಾಲ್ಲೂಕಿನ ಮೇಲಿನ ಕಣಿವೆ ಗ್ರಾಮದಿಂದ ಹಿರಿಯೂರು ತಾಲ್ಲೂಕಿನ ಜವಗೊಂಡನಹಳ್ಳಿಯವರೆಗೆ ಚಿತ್ರದುರ್ಗ ಗಡಿ ಮುಕ್ತಾಯದವರಗೆ ಮಾನವ ಸರಪಳಿ ನಿರ್ಮಿಸಲು ಯೋಜನೆ ರೂಪಿಸಲಾಗಿದೆ. ಇದಕ್ಕಾಗಿ ಎಲ್ಲ ರೀತಿಯ ಪೂರ್ವಸಿದ್ಧತೆಗಳನ್ನು ಕೈಗೊಳ್ಳಲಾಗಿದೆ. ಈ ಕಾರ್ಯಕ್ರಮದಲ್ಲಿ ಜಿಲ್ಲೆಯಲ್ಲಿ ಸುಮಾರು 1.20 ಲಕ್ಷ ಜನರು ಭಾಗವಹಿಸಲಿದ್ದಾರೆ. ಈ ಕುರಿತು ಕಳೆದ ವಾರದಿಂದಲೂ ಎಲ್ಲ ತಾಲ್ಲೂಕುಗಳಲ್ಲಿಯೂ ನಿರಂತರವಾಗಿ ಸಭೆಗಳನ್ನು ನಡೆಸಿ, ಅಧಿಕಾರಿಗಳು, ನೌಕರರು, ಸಾರ್ವಜನಿರು, ಸಂಘ ಸಂಸ್ಥೆಳ ಜೊತೆ ಸಂಪರ್ಕ ಸಾಧಿಸಿ ಮಾನವ ಸರಪಳಿ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲು ಮನವಿ ಮಾಡಲಾಗಿದೆ ಎಂದು ಹೇಳಿದರು.

ರಾಜ್ಯಾದ್ಯಂತ ಏಕಕಾಲಕ್ಕೆ ನಡೆಯುವ ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಕಾರ್ಯಕ್ರಮ ಸೆ.15ರಂದು ಬೆಳಿಗ್ಗೆ 9.30 ರಿಂದ 10.30 ರವರೆಗೆ ನಡೆಯಲಿದೆ. ಬೆಳಿಗ್ಗೆ 9.30 ರಿಂದ 9.37 ಮಾನವ ಸರಪಳಿಯಲ್ಲಿ ಭಾಗವಹಿಸುವವರು ಸರತಿ ಸಾಲಿನಲ್ಲಿ ನಿಲ್ಲುವುದು, ಬೆಳಿಗ್ಗೆ 9.37 ರಿಂದ 9.40 ನಾಡಗೀತೆ, ಬೆಳಿಗ್ಗೆ 9.41 ರಿಂದ 9.55 ರವರೆಗೆ ಮುಖ್ಯ ಅತಿಥಿಗಳ ಭಾಷಣ, ಬೆಳಿಗ್ಗೆ 9.55 ರಿಂದ 9.57 ರವರೆಗೆ ಸಂವಿಧಾನ ಪ್ರಸ್ತಾವನೆ ಓದುವುದು, ಬೆಳಿಗ್ಗೆ 9.57 ರಿಂದ 9.59 ರವರೆಗೆ ಮಾನವ ಸರಪಳಿಯಲ್ಲಿ ಕೈ ಕೈ ಹಿಡಿದು ನಿಲ್ಲುವುದು ಆ ಸಂದರ್ಭದಲ್ಲಿ ಡ್ರೋನ್ ಶೂಟ್, ವಿಡಿಯೋಗ್ರಾಫಿ ಮಾಡಲಾಗುವುದು. ಬೆಳಿಗ್ಗೆ 10ಕ್ಕೆ ಮಾನವ ಸರಪಳಿಯಲ್ಲಿಯೇ ತಮ್ಮ ಎರಡು ಕೈಗಳನ್ನು ಮೇಲೆತ್ತಿ ಜೈ ಹಿಂದ್ ಕೈ ಕರ್ನಾಟಕ ಘೋಷಣೆ ಕೂಗಿ ಸರಪಳಿ ಕಳಚುವುದು, ನಂತರ ಕಾರ್ಯಕ್ರಮ ಮುಕ್ತಾಯವಾಗುವುದು. ಕಾರ್ಯಕ್ರಮದ ಅಂಗವಾಗಿ ಸಸಿ ನೆಡುವ ಕಾರ್ಯಕ್ರಮ ನಡೆಯಲಿದೆ. ರಾಜ್ಯಾದ್ಯಂತ ಏಕಕಾಲಕ್ಕೆ ಕಾರ್ಯಕ್ರಮ ನಡೆಯುವುದರಿಂದ ಮಾನವ ಸರಪಳಿ ಕಾರ್ಯಕ್ರಮ ಗಿನ್ನೆಸ್ ದಾಖಲೆಯಾಗಲಿದೆ ಎಂದು ಜಿಲ್ಲಾಧಿಕಾರಿ ಟಿ.ವೆಂಕಟೇಶ್ ತಿಳಿಸಿದರು.




**ಜಿಲ್ಲೆಯಲ್ಲಿ 145 ಕಿ.ಮೀ ಮಾನವ ಸರಪಳಿ:** ಜಿಲ್ಲೆಯ ಮೊಳಕಾಲ್ಮುರು ತಾಲ್ಲೂಕಿನಲ್ಲಿ ಅಂದಾಜು 55 ಕಿ.ಮೀ, ಚಳ್ಳಕೆರೆ 47 ಕಿ.ಮೀ ಹಾಗೂ ಹಿರಿಯೂರು 43 ಕಿ.ಮೀ ಸೇರಿದಂತೆ ಜಿಲ್ಲಾ ವ್ಯಾಪ್ತಿಯ ರಾಷ್ಟ್ರೀಯ ಹೆದ್ದಾರಿಯಲ್ಲಿ ಒಟ್ಟು 145 ಕಿ.ಮೀ ದೂರದವರೆಗೆ ಮಾನವ ಸರಪಳಿ ನಿರ್ಮಿಸಲಾಗುವುದು. ರಾಜ್ಯದಲ್ಲಿ ಉತ್ತರ ಕನ್ನಡ ಜಿಲ್ಲೆಯಲ್ಲಿ 170 ಕಿ.ಮೀ. ಉದ್ದದ ಮಾರ್ಗವಿದ್ದರೂ, ದಟ್ಟ ಅರಣ್ಯ ಪ್ರದೇಶದ ವ್ಯಾಪ್ತಿಯನ್ನು ಹೊರತುಪಡಿಸುವುದರಿಂದ, ರಾಜ್ಯದಲ್ಲಿ ಚಿತ್ರದುರ್ಗ ಜಿಲ್ಲೆಯದೇ 145 ಕಿ.ಮೀ. ಅತಿ ಉದ್ದನೆಯ ಮಾನವ ಸರಪಳಿ ನಿರ್ಮಾಣ ಆಗಲಿದೆ. ಮಾನವ ಸರಪಳಿ ಮೊಳಕಾಲ್ಮುರು, ಚಳ್ಳಕೆರೆ ಮತ್ತು ಹಿರಿಯೂರು ಈ ಮೂರು ತಾಲ್ಲೂಕುಗಳಲ್ಲಿ ನಿರ್ಮಿಸಲಾಗುವುದು. ಉಳಿದ ಮೂರು ತಾಲ್ಲೂಕುಗಳಾದ ಚಿತ್ರದುರ್ಗ, ಹೊಳಲ್ಕೆರೆ ಹಾಗೂ ಹೊಸದುರ್ಗ ತಾಲ್ಲೂಕುಗಳ ಅಧಿಕಾರಿಗಳು, ನೌಕರರು, ಸಾರ್ವಜನಿಕರು, ಸಂಘ ಸಂಸ್ಥೆಗಳ ಪದಾಧಿಕಾರಿಗಳು ಈ ಕಾರ್ಯಕ್ರಮದಲ್ಲಿ ಕೈಜೋಡಿಸಬೇಕು ಎಂದು ಹೇಳಿದರು.

**ಪ್ರತಿ ಕಿ.ಮೀ. ಗೆ 850 ಜನರಿಂದ ಮಾನವ ಸರಪಳಿ:** ಪ್ರತಿ ಕಿ.ಮೀಗೆ ಅಂದಾಜು 850 ಜನರಂತೆ ಮಾನವ ಸರಪಳಿ ನಿರ್ಮಿಸಲಾಗುವುದು. ಒಟ್ಟು 145 ಕಿ.ಮೀ ಮಾನವ ಸರಪಳಿ ನಿರ್ಮಾಣಕ್ಕೆ ಅಂದಾಜು 1.20 ಲಕ್ಷ ಜನರು, ವಿದ್ಯಾರ್ಥಿಗಳು ಭಾಗವಹಿಸಬೇಕಾಗಿರುತ್ತದೆ. 35 ಸಾವಿರ ಪ್ರೌಢಶಾಲಾ ವಿದ್ಯಾರ್ಥಿಗಳು, 8 ಸಾವಿರ ಪದವಿಪೂರ್ವ ವಿದ್ಯಾರ್ಥಿಗಳು, 5 ಸಾವಿರ ಪದವಿ ಕಾಲೇಜಿನ ವಿದ್ಯಾರ್ಥಿಗಳು, 13 ಸಾವಿರ ಸ್ವ–ಸಹಾಯ ಸಂಘಗಳ ಸದಸ್ಯರು, 35 ಸಾವಿರ ಧರ್ಮಸ್ಥಳ ಸ್ವ–ಸಹಾಯ ಸಂಘಗಳ ಸದಸ್ಯರು, 800 ಆಶಾ ಕಾರ್ಯಕರ್ತರು, 1200 ಅಂಗನವಾಡಿ ಕಾರ್ಯಕರ್ತರು, 8 ಸಾವಿರ ಬೋಧಕ ಹಾಗೂ ಬೋಧಕೇತರ ಸಿಬ್ಬಂದಿ, ಮಾನವ ಸರಪಳಿ ರಚಿಸುವ ಮಾರ್ಗದಲ್ಲಿನ ಅಕ್ಕಪಕ್ಕದ ಗ್ರಾಮ ಪಂಚಾಯಿತಿಗಳಿಂದ ಸುಮಾರು 25 ಸಾವಿರ ಜನರು ಹಾಗೂ ನಗರ ಸ್ಥಳೀಯ ಸಂಸ್ಥೆಗಳಿಂದ ಸುಮಾರು 15 ಸಾವಿರ ಜನರು ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ಪ್ರತಿ 100 ಮೀಟರ್‌ಗೆ ಒಬ್ಬರಂತೆ ಒಟ್ಟು 1400 ಸಿಬ್ಬಂದಿ, ಪ್ರತಿ ಕಿ.ಮೀಟರ್‌ಗೆ ಒಬ್ಬರಂತೆ ಒಟ್ಟು 145 ನೋಡಲ್ ಅಧಿಕಾರಿಗಳು, ತಾಲ್ಲೂಕು ಅಧಿಕಾರಿಗಳು ಹಾಗೂ ಪ್ರತಿ 5 ಕಿ.ಮೀಟರ್‌ಗೆ ಒಬ್ಬರಂತೆ 28 ಜಿಲ್ಲಾ ಮಟ್ಟದ ಅಧಿಕಾರಿಗಳು, ಪ್ರತಿ 20 ರಿಂದ 25 ಕಿ. ಮೀ. ಗೆ ಹಿರಿಯ ಜಿಲ್ಲಾ ಮಟ್ಟದ ಅಧಿಕಾರಿಗಳನ್ನು ಮೇಲ್ವಿಚಾರಣಾ ನೋಡಲ್‌ಅಧಿಕಾರಿಗಳನ್ನುನೇಮಿಸಲಾಗಿದೆ ಎಂದು ತಿಳಿಸಿದ ಅವರು, ಅತೀ ಉದ್ದದ ಮಾನವ ಸರಪಳಿ ನಿರಂತರವಾಗಿ ರಚನೆ ಮಾಡುವ ನಿಟ್ಟಿನಲ್ಲಿ ಅಗತ್ಯ ಕ್ರಮಕೈಗೊಳ್ಳಲಾಗಿದೆ ಎಂದು ತಿಳಿಸಿದರು.

ಮಾನವ ಸರಪಳಿ ರಚನೆ ಕಾರ್ಯಕ್ರಮಕ್ಕೆ ಜಿಲ್ಲೆಯ ಖಾಸಗಿ ಹಾಗೂ ಖಾಸಗಿ ಅನುದಾನಿತ ಶಾಲಾ–ಕಾಲೇಜುಗಳ ವಾಹನಗಳನ್ನು ಉಚಿತವಾಗಿ ನೀಡಲು ಮನವಿ ಮಾಡಲಾಗಿದ್ದು, ಜಿಲ್ಲೆಯಾದ್ಯಂತ 400 ಕ್ಕೂ ಹೆಚ್ಚು ವಾಹನಗಳ ವ್ಯವಸ್ಥೆ ಮಾಡಲಾಗಿದೆ. 20 ಖಾಸಗಿ ಬಸ್‌ನವರು ವಾಹನದ ವ್ಯವಸ್ಥೆ ಮಾಡಿಕೊಡಲಿದ್ದಾರೆ. ಕಾರ್ಯಕ್ರಮದಲ್ಲಿ ಭಾಗವಹಿಸುವ ಸಾರ್ವಜನಿಕರು, ವಿದ್ಯಾರ್ಥಿಗಳಿಗೆ ಕುಡಿಯುವ ನೀರಿನ ವ್ಯವಸ್ಥೆ, ತುರ್ತು ಆರೋಗ್ಯಅಂಬುಲೆನ್ಸ್‌ಹಾಗೂಅಗ್ನಿಶಾಮಕ ವಾಹನಗಳನ್ನು ನಿಯೋಜಿಸಲು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಸಂಚಾರ ಸುವ್ಯವಸ್ಥೆ ಹಾಗೂ ಸೂಕ್ತ ಬಂದೋಬಸ್ತ್‌ಗಾಗಿ ಪೊಲೀಸ್ ಇಲಾಖೆಯಿಂದ ಯೋಜನೆ ರೂಪಿಸಲಾಗಿದೆ ಎಂದು ಹೇಳಿದರು.

ಅಪರಜಿಲ್ಲಾಧಿಕಾರಿಬಿ.ಟಿ.ಕುಮಾರಸ್ವಾಮಿ ಮಾತನಾಡಿ, ಅಂತರ ರಾಷ್ಟ್ರೀಯ ಪ್ರಜಾಪ್ರಭುತ್ವದ ದಿನಾಚರಣೆ ಅಂಗವಾಗಿ ಸೆ. 15 ರಂದು ಬೆಳಿಗ್ಗೆ ವೇದಿಕೆ ಕಾರ್ಯಕ್ರಮ ಹಿರಿಯೂರು ನಗರದ ಅಂಬೇಡ್ಕರ್ ವೃತ್ತದಲ್ಲಿ ನಡೆಯಲಿದೆ. ಕಾರ್ಯಕ್ರಮದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರು ಸೇರಿದಂತೆ ಗಣ್ಯಾತಿಗಣ್ಯರು, ಜನಪ್ರತಿನಿಧಿಗಳು, ಅಧಿಕಾರಿಗಳು ಭಾಗವಹಿಸುವರು ಎಂದು ಹೇಳಿದರು. ಪತ್ರಿಕಾಗೋಷ್ಠಿಯಲ್ಲಿ ಸಮಾಜ ಕಲ್ಯಾಣ ಇಲಾಖೆ ಜಂಟಿ ನಿರ್ದೇಶಕ ಜಗದೀಶ್ ಹೆಬ್ಬಳ್ಳಿ ಇದ್ದರು.

## ಪ್ರಮುಖ ಸುದ್ದಿ

ರಜೆ ಸಮಯ ಹಾಗೂ ಸಂಜೆ ವೇಳೆ ರಾತ್ರಿ ಕುಡಿದ ಬಾಟಲ್‌ಗಳು ಅಲ್ಲೇ ಬಿದ್ದಿರುತ್ತವೆ

# ಬಾಗೂರಿನ ಶಾಲಾ ಮೈದಾನ ಪುಂಡ ಪೋಕರಿಗಳ ಅಡ್ಡೆ

» ನಾಗತಿಹಳ್ಳಿಮಂಜುನಾಥ್

ಹೊಸದುರ್ಗ : ತಾಲ್ಲೂಕಿನ ಬಾಗೂರು (ಸಣ್ಣಕ್ಕಿಬಾಗೂರು) ಎಂದರೆ ಒಂದು ಇತಿಹಾಸ, ಈ ಗ್ರಾಮದಲ್ಲಿ ನೂರೊಂದು ದೇವಾಲಯಗಳಿವೆ,ಇಲ್ಲಿ ಭಕ್ತಿ ಭಾವ ತುಂಬಿ ತುಳುಕುತ್ತಿದೆ ಆದರೆ ಮತ್ತೊಂದೆಡೆ ಶಿಸ್ತು ಇಲ್ಲದ ಕೆಲವು ಪುಂಡ ಪೋಕರಿಗಳಿಂದ ಈ ಗ್ರಾಮಕ್ಕೆ ಒಂದು ಕಪ್ಪು ಚುಕ್ಕೆ ಬಂದಂತಾಗಿದೆ. ಈ ಗ್ರಾಮದಲ್ಲಿರುವ ಶ್ರೀಪರಪ್ಪ ಸ್ವಾಮಿ ಗ್ರಾಮಾಂತರ ಪ್ರೌಢಶಾಲೆ ಹಾಗೂ ಈ ಶಾಲೆಯಲ್ಲಿ ವಿದ್ಯಾಬ್ಯಾಸ ಮಾಡುವ ವಿದ್ಯಾರ್ಥಿಗಳು ಮಹಾತ್ಮಗಾಂಧಿಜೀಯವರ ಬಿಳಿ ಟೋಪಿಯನ್ನ ಧರಿಸಿ ನಿತ್ಯವೂ ಶಿಸ್ತಿನಿಂದ ಶಾಲೆಗೆ ಬಂದು ಶ್ರದ್ದೆಯಿಂದ ಪಾಠ ಕೇಳುತ್ತಾರೆ ಶಾಲೆ ಮಾತ್ರ ಶಿಸ್ತಿನಿಂದ ಇದೆ ಆದರೆ ಈ ಗ್ರಾಮದ ಕೆಲವು ಪುಂಡರಿಂದ ತಲೆತಗ್ಗಿಸುವಂತಾಗಿದೆ ಇಲ್ಲಿನ ಶಾಲೆಯ ಮೈದಾನ ಪುಂಡ ಪೋಕರಿಗಳ ಆಟದ ತಾಣವಾಗಿ ಪರಿಣಮಿಸಿದೆ. ಜ್ಞಾನ ದೇಗುಲದಲ್ಲಿ ಸ್ವಚ್ಛತೆ ಸಾರ್ವಜನಿಕರ ಸಹಕಾರ ಮರೀಚಿಕೆಯಾಗಿದೆ.

ಶಾಲೆಯ ಮುಂಭಾಗದಲ್ಲಿ ಕಾಂಪೌಂಡ್ ನಿರ್ಮಾಣ ಆಗಿದೆ, ಆದರೆ ಅದಕ್ಕೆ ಗೇಟ್ ಸೌಲಭ್ಯವಿಲ್ಲ. ಇನ್ನೂ ಶಾಲೆಯ ಹಿಂಭಾಗ ವಿಸ್ತಾರವಾದ ಆಟದ ಮೈದಾನವನ್ನು ಹೊಂದಿದೆ. ವಿದ್ಯಾರ್ಥಿಗಳ ಆಟೋಟಕ್ಕೆ ಅನುಕೂಲವಾಗಿರುವ ಈ ಸ್ಥಳದಲ್ಲಿ ನಿತ್ಯ ಕುಡುಕರ ಕಾಟ ಎದುರಿಸಲಾಗುತ್ತಿದೆ.

ರಜೆ ಸಮಯ ಹಾಗೂ ಸಂಜೆ ವೇಳೆ ರಾತ್ರಿ ಕುಡಿದ ಬಾಟಲ್ ಗಳು ಅಲ್ಲೇ ಬಿದ್ದಿರುತ್ತವೆ. ಸಾಲದ್ದಕ್ಕೆ ಅಲ್ಲಲ್ಲಿ ಬಾಟಲ್ ಗಳನ್ನು ಒಡೆದು ಹಾಕಿರುತ್ತಾರೆ. ಹಲವು ಬಾರಿ ವಿದ್ಯಾರ್ಥಿಗಳಿಗೆ ಗಾಯವೂ ಆಗಿದ್ದುಂಟು. ಶಿಕ್ಷಕರು ಡಿ ಗ್ರೂಪ್ ನೌಕರರ ಬಳಿ ಕೆಲಸ ಮಾಡಿಸುತ್ತಿದ್ದಾರೆ.

ಶಾಲಾ ಸ್ವಚ್ಛತೆ ಬಗ್ಗೆ ಸಾರ್ವಜನಿಕರಲ್ಲಿ ಅರಿವಿರಬೇಕು. ಅಲ್ಲಲ್ಲಿ ಬಾಟಲ್ ಬೀಸಾಡುವರು, ಗಣೇಶ ಚತುರ್ಥಿ ಹಾಗೂ ಏಕಾದಶಿ ಹಬ್ಬದಂದು ಜನರು ಊಟ ಮಾಡಿ, ಎಲೆಗಳನ್ನು ಇಲ್ಲಿಯೇ ಬಿಟ್ಟು ಹೋಗುವರು. ರಜಾ ದಿನಗಳಲ್ಲಿ ನಂತರದಲ್ಲಿ ಶಾಲಾ ಸ್ವಚ್ಛತೆಯೇ ಸವಾಲಾಗಿದೆ. ಸಾಲದ್ದಕ್ಕೆ ಗೋಡೆಗಳ ಮೇಲೆ ಅಶ್ಲೀಲ ಶಬ್ದಗಳು ಬರವಣಿಗೆಯೂ ಇರುತ್ತದೆ. ವಿದ್ಯಾರ್ಥಿಗಳು ಸಹ ಮೈದಾನಕ್ಕೆ ಬರಲು ಹಿಂದೇಟು ಹಾಕುತ್ತಾರೆ. ಎಮ್ಮೆ, ಹಸು, ಕುರಿಗಳನ್ನು ಸಹ ಇಲ್ಲಿ ಮೇವಿಗೆ ಬಿಡುವರು, ಅವುಗಳು ಶಾಲಾ ಆವರಣದಲ್ಲಿ ಹಾಕಿದ್ದ, ಒಂದೂ ಗಿಡಗಳು ಉಳಿಯಲು ಬಿಡುವುದಿಲ್ಲ. ಎಷ್ಟು ಬಾರಿ ಹೇಳಿದರೂ ಅರ್ಥವಾಗುತ್ತಿಲ್ಲ. ಒಂದು ಸುಸಜ್ಜಿತ ಕಾಂಪೌಂಡ್ ನಿರ್ಮಿಸಿದರೆ ಸಾಕು ಎನ್ನುತ್ತಾರೆ ಈ ಶಾಲೆಯ ಮುಖ್ಯೋಪಾಧ್ಯಾಯ ಟಿ. ಶೇಖರಪ್ಪ ಅವರು



> ಪರಪ್ಪ ಸ್ವಾಮಿ ಗ್ರಾಮಾಂತರ ಪ್ರೌಢಶಾಲೆಯೂ ಅನುದಾನಿತ ಶಾಲೆಯಾಗಿದ್ದು, ಸರ್ಕಾರದಿಂದ ಸೌಲಭ್ಯ ದೊರೆಯುವುದು ವಿರಳಾತೀವಿರಳ. ಆಡಳಿತ ಮಂಡಳಿಯವರು ಈ ಜವಾಬ್ದಾರಿ ಹೊರಬೇಕು. ಶಾಲೆಗೆ ಸಿಸಿಟಿವಿ ಹಾಕಿಸುವಂತೆ ಆದೇಶ ಮಾಡಲಾಗುವುದು.
>
> » **ಸೈಯದ್ ಮೋಸಿನ್.ಬಿ.ಇ.ಓ**

> ಈಗಾಗಲೆ ಈ ಶಾಲೆಗೆ ಹಲವು ಬಾರಿ ಶಾಲೆಗೆ ಭೇಟಿ ನೀಡಲಾಗಿದೆ. ಸಿಸಿಟಿವಿ ಹಾಕಿಸುವಂತೆ ಮನವಿ ಮಾಡಲಾಗಿದೆ. ವಿದ್ಯಾರ್ಥಿಗಳಿಗೆ ತೊಂದರೆಯಾದರೆ, ಕಠಿಣ ಕ್ರಮ ಕೈಗೊಳ್ಳುವೆ. ಒಬ್ಬ ಆರಕ್ಷಕ ಸಿಬ್ಬಂದಿ ಕಳುಹಿಸಿ, ಎಚ್ಚರಿಕೆ ನೀಡುವೆ
>
> » **ತಿಮ್ಮಣ್ಣ, ಸಿ.ಪಿ.ಐ, ಹೊಸದುರ್ಗ**



## ಫಾಸ್ಟ್ ನ್ಯೂಸ್

### ವಿಜ್ಞಾನ ಶಿಕ್ಷಕರಿಗೆ ಪ್ರಾಯೋಗಿಕ ತರಬೇತಿ

» **ಚಳ್ಳಕೆರೆ**

ತಾಲ್ಲೂಕಿನ ಪ್ರಾಥಮಿಕ ಮತ್ತು ಪ್ರೌಢಶಾಲಾ ವಿಜ್ಞಾನ ಶಿಕ್ಷಕರಿಗೆ ವಿಜ್ಞಾನ ಪ್ರಾಯೋಗಿಕ ತರಬೇತಿ ಕಾರ್ಯಗಾರವನ್ನು ತಳಕು ಎಸ್.ಜಿ.ಟಿ.ಸರ್ಕಾರಿ ಪ್ರೌಢಶಾಲಾ ಆವರಣದಲ್ಲಿ ಹಮ್ಮಿಕೊಂಡಿದ್ದು, ಮುಖ್ಯಶಿಕ್ಷಕ ಸೈಯದ್ ಪೈಜುಲ್ಲಾ ಕಾರ್ಯಕ್ರಮ ಉದ್ಘಾಟಿಸಿದರು. ಅಗಸ್ತ್ಯ ಫೌಂಡೇಷನ್ ಅಂತರಾಷ್ಟ್ರೀಯ ಪ್ರತಿಷ್ಠಾನ, ಟಾಟಾ ಪವರ್‌ಲ್ಯಾಬ್ ಆನ್ ವಿ, ಬೈಕ್, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಸಹಯೋಗದಲ್ಲಿ ತಳಕು ಹೋಬಳಿಯ ಆಯ್ದ 30 ಸರ್ಕಾರಿ ಶಾಲೆಗಳ ವಿಜ್ಞಾನ ಶಿಕ್ಷಕರಿಗೆ ಕಾರ್ಯಕ್ರಮದಲ್ಲಿ ಭಾಗವಹಿಸಲು ಅವಕಾಶ ನೀಡಲಾಗಿತ್ತು. ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದ ಮುಖ್ಯಶಿಕ್ಷಕ ಸೈಯದ್ ಪೈಜುಲ್ಲಾ ದೇಶದ ವಿಜ್ಞಾನ ಇಂದು ವಿಶ್ವಮನ್ನಣೆ ಗಳಿಸಿದೆ. ವಿಜ್ಞಾನದ ವಿಚಾರದಲ್ಲಿ ಪ್ರಗತಿಯನ್ನು ಸಾಧಿಸಿದರೆ ಮಾತ್ರ ನಾವೆಲ್ಲರೂ ಗುರಿಯನ್ನು ಸುಲಭವಾಗಿ ದಾಟಬಹುದು. ಈ ನಿಟ್ಟಿನಲ್ಲಿ ವಿಜ್ಞಾನ ಶಿಕ್ಷಕರು ವಿದ್ಯಾರ್ಥಿಗಳಿಗೆ ಹೆಚ್ಚು ಜ್ಞಾನವನ್ನು ತುಂಬುವ ಕಾರ್ಯದಲ್ಲಿ ನಿರತರಾಗಬೇಕು ಎಂದರು.

### ಕಿಸಾನ್ ಕ್ರೆಡಿಟ್ ಕಾರ್ಡ್: ಅರ್ಜಿ ಆಹ್ವಾನ

» **ಚಿತ್ರದುರ್ಗ**

ಪಶು ಪಾಲನಾ ಮತ್ತು ಪಶು ವೈದ್ಯಕೀಯ ಸೇವಾ ಇಲಾಖೆ ವತಿಯಿಂದ 2024-25ನೇ ಸಾಲಿನ ಕಿಸಾನ್ ಕ್ರೆಡಿಟ್ ಕಾರ್ಡ್ ವಿತರಣಾ ಕಾರ್ಯಕ್ರಮದಡಿ ದನ, ಎಮ್ಮೆ, ಕುರಿ, ಮೇಕೆ, ಹಂದಿ ಹಾಗೂ ಕೋಳಿ ಸಾಕಾಣಿಕೆ ನಿರ್ವಹಣೆಗೆ ಕಡಿಮೆ ಬಡ್ಡಿ ದರದಲ್ಲಿ ಸಾಲ ಸೌಲಭ್ಯ ಪಡೆಯಲು ಆಸಕ್ತಿ ಹೊಂದಿರುವ ರೈತರಿಂದ ಅರ್ಜಿ ಆಹ್ವಾನಿಸಲಾಗಿದೆ. ಈ ಕಾರ್ಯಕ್ರಮದಡಿ ಸಾಲ ಸೌಲಭ್ಯವು 2024 ಸೆಪ್ಟಂಬರ್ 15 ರಿಂದ 2025 ಮಾರ್ಚ್ 31 ರವರಗೆ ಮುಂದುವರೆಸಲಾಗುವುದು. ಆಸಕ್ತ ರೈತರು ತಮ್ಮ ಹತ್ತಿರದ ಪಶು ವೈದ್ಯಕೀಯ ಸಂಸ್ಥೆಗಳಿಂದ ಅರ್ಜಿಗಳನ್ನು ಪಡೆದು ಭರ್ತಿಮಾಡಿ ಸಲ್ಲಿಸಲು ಸೂಚಿಸಲಾಗಿದೆ. ಹೆಚ್ಚಿನ ಮಾಹಿತಿಗಾಗಿ ಚಿತ್ರದುರ್ಗ-9482943111, ಚಳ್ಳಕೆರೆ-9448816499, ಹೊಳಲ್ಕೆರೆ- 9972965479, ಹೊಸದುರ್ಗ- 9945298407, ಹಿರಿಯೂರು-9483451044,ಮೊಳಕಾಲ್ಮೂರು-9900964820 ಗೆ ಸಂಪರ್ಕಿಸಬಹುದು ಎಂದು ಪಶು ಪಾಲನಾ ಇಲಾಖೆ ಉಪನಿರ್ದೇಶಕರು ತಿಳಿಸಿದ್ದಾರೆ.

### ಸೆ.17ರಂದು ವಿಶ್ವಕರ್ಮ ಜಯಂತಿ

» **ಚಿತ್ರದುರ್ಗ**

ಜಿಲ್ಲಾಡಳಿತ ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಸಹಯೋಗದಲ್ಲಿ ಇದೇ.ಸೆ.17ರಂದು ಬೆಳಿಗ್ಗೆ 11.30ಕ್ಕೆ ನಗರದ ತ.ರಾ.ಸು ರಂಗಮಂದಿರದಲ್ಲಿ ವಿಶ್ವಕರ್ಮ ಜಯಂತಿ ದಿನಾಚರಣೆ ಕಾರ್ಯಕ್ರಮ ಆಯೋಜಿಸಲಾಗಿದೆ.ಯೋಜನಾ ಮತ್ತು ಸಾಂಖ್ಯಿಕ ಸಚಿವ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಕಾರ್ಯಕ್ರಮ ಉದ್ಘಾಟಿಸುವರು. ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ ಅಧ್ಯಕ್ಷತೆ ವಹಿಸುವರು. ಗೌರವಾನ್ವಿತ ಅತಿಥಿಗಳಾಗಿ ಸಂಸದ ಗೋವಿಂದ ಎಂ ಕಾರಜೋಳ, ಶಾಸಕರಾದ ಬಿ.ಜಿ.ಗೋವಿಂದಪ್ಪ, ಟಿ.ರಘುಮೂರ್ತಿ, ಎನ್.ವೈ.ಗೋಪಾಲಕೃಷ್ಣ, ಡಾ.ಎಂ.ಚಂದ್ರಪ್ಪ, ವಿಧಾನ ಪರಿಷತ್ ಸದಸ್ಯರಾದ ಚಿದಾನಂದ ಎಂ ಗೌಡ, ಕೆ.ಎಸ್.ನವೀನ್ ಕುಮಾರ್, ಡಿ.ಟಿ.ಶ್ರೀನಿವಾಸ್, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಅಧ್ಯಕ್ಷ ಕೆ.ಅನ್ವರ್ ಭಾಷಾ ಹಾಗೂ ಮುಖ್ಯ ಅತಿಥಿಗಳಾಗಿ ಕರ್ನಾಟಕ ದ್ರಾಕ್ಷರಸ ಮಂಡಳಿ ಅಧ್ಯಕ್ಷ ಡಾ.ಬಿ.ಯೋಗೇಶ್ ಬಾಬು, ಕರ್ನಾಟಕ ಆಧಿಜಾಂಬವ ಅಭಿವೃದ್ಧಿ ನಿಗಮ ಮಂಡಳಿ ಅಧ್ಯಕ್ಷ ಜಿ.ಎಸ್.ಮಂಜುನಾಥ್, ಕರ್ನಾಟಕ ಸಫಾಯಿ ಕರ್ಮಚಾರಿ ಆಯೋಗದ ಅಧ್ಯಕ್ಷೆ ಸವಿತಾ ರಘು, ನಗರಸಭೆ ಅಧ್ಯಕ್ಷೆ ಸುಮಿತಾ ಬಿ.ಎನ್.ರಾಘವೇಂದ್ರ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ತಾಜ್‌ಪೀರ್, ವಿಶ್ವಕರ್ಮ ಸಮಾಜದ ಜಿಲ್ಲಾಧ್ಯಕ್ಷ ಕೆ.ಟಿ.ಸುರೇಶಾಚಾರ್ಯ, ವಿಶ್ವಕರ್ಮ ಕಾಳಿಕಾಂಬ ಕಲ್ಯಾಣ ಮಂಟಪ ಟ್ರಸ್ಟ್ ಅಧ್ಯಕ್ಷ ಎ.ಶಂಕರಾಚಾರ್, ಜಿಲ್ಲೆಯ ಸಮಸ್ತ ಜನಪ್ರತಿನಿಧಿಗಳು, ಜಿಲ್ಲೆಯ ವಿಶ್ವಕರ್ಮ ಸಮಾಜದ ಗೌರವಾನ್ವಿತ ಮುಖಂಡರು ಹಾಗೂ ಗಣ್ಯರು ಭಾಗವಹಿಸುವರು. ಹಿರಿಯೂರು ತಾಲ್ಲೂಕಿನ ಗನ್ನಾಯಕನಹಳ್ಳಿ ಸರ್ಕಾರಿ ಪ್ರೌಢಶಾಲೆ ಶಿಕ್ಷಕ ರಾಘವೇಂದ್ರಾಚಾರ್ ಉಪನ್ಯಾಸ ನೀಡುವರು. ಹೊಸದುರ್ಗದ ಸರಸ್ವತಿ ಮತ್ತು ತಂಡ ಗೀತಾ ಗಾಯನ ಪ್ರಸ್ತುತ ಪಡಿಸಲಿದ್ದಾರೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ರವಿಚಂದ್ರ ತಿಳಿಸಿದ್ದಾರೆ.

### ಸೆ.30ರವರೆಗೆ ಐಟಿಐ ಪ್ರವೇಶಾತಿ ವಿಸ್ತರಣೆ

» **ಚಿತ್ರದುರ್ಗ**

ಚಳ್ಳಕೆರೆ ಸರ್ಕಾರಿ ಕೈಗಾರಿಕಾ ತರಬೇತಿ ಸಂಸ್ಥೆಯಲ್ಲಿ 2024-25ನೇ ಸಾಲಿಗೆ ವಿವಿಧ ವೃತ್ತಿ, ಘಟಕಗಳಲ್ಲಿ ಖಾಲಿ ಉಳಿದಿರುವ ಸ್ಥಾನಗಳ ನೇರ ಪ್ರವೇಶಾತಿ ಅವಧಿಯನ್ನು ಸೆ.30 ವರೆಗೆ ವಿಸ್ತರಿಸಲಾಗಿದೆ. 4 ಫಿಟ್ಟರ್, 19 ಇಎಂ, 1 ಎಂ.ಇ.ವಿ, 03 ಸಿಎನ್‌ಸಿ, 24 ಎಂ.ಎಂ.ವಿ ಹಾಗೂ ಎಂ.ಆರ್&ಎ.ಸಿ 29 ವೆಲ್ಡರ್ ಸ್ಥಾನಗಳಿಗೆ ಸಿಟಿಎಸ್ ಮತ್ತು ಪಿಪಿಪಿ ಅಡಿಯಲ್ಲಿ ಅಭ್ಯರ್ಥಿಗಳು ದಾಖಲಾಗಬಹುದು. ಮಾಹಿತಿಗಾಗಿ 9900398732, 8748885598 ಹಾಗೂ 9342276951 ಸಂಪರ್ಕಿಸಬಹುದು.

# ಮಾನವ ಸರಪಳಿ ಕಾಯಕ್ರಮ ಯಶಸ್ವಿಗೊಳಿಸಿ

## ಪ್ರಜಾಪ್ರಭುತ್ವ ದಿನಾಚರಣೆ ಕುರಿತು ತಾಲ್ಲೂಕುಮಟ್ಟದ ಸಮಮನ್ವಯ ಸಮಿತಿ ಸಭೆಯಲ್ಲಿ ಎಸಿ ಸೂಚನೆ

» **ಚಿತ್ರದುರ್ಗ**

ಅಂತರ ರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಅಂಗವಾಗಿ ಹಮ್ಮಿಕೊಂಡಿರುವ ಮಾನವ ಸರಪಳಿ ಕಾರ್ಯಕ್ರಮ ಯಶಸ್ವಿಗೆ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಅಧಿಕಾರಿಗಳು ತಮ್ಮ ತಮ್ಮ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುವಂತೆ ಉಪವಿಭಾಗಾಧಿಕಾರಿ ಹಾಗೂ ಮೊಳಕಾಲ್ಮುರು ತಾಲ್ಲೂಕು ಸಮಗ್ರ ಮೇಲ್ವಿಚಾರಣಾ ನೋಡಲ್ ಅಧಿಕಾರಿ ಎಂ.ಕಾರ್ತಿಕ್ ಹೇಳಿದರು.

ಮೊಳಕಾಲ್ಮುರು ತಾಲ್ಲೂಕು ಆಡಳಿತ ಸಭಾಂಗಣದಲ್ಲಿ ಶುಕ್ರವಾರ ಅಂತರ ರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ ಕಾರ್ಯಕ್ರಮ ಅನುಷ್ಠಾನಗೊಳಿಸುವ ಕುರಿತು ಹಮ್ಮಿಕೊಂಡಿದ್ದ ತಾಲ್ಲೂಕು ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆವಹಿಸಿ ಅವರು ಮಾತನಾಡಿದರು.

ಮೊಳಕಾಲ್ಮುರು ಅತಿ ಉದ್ದನೆಯ ಕಿಲೋಮೀಟರ್ ಹೊಂದಿರುವ ತಾಲ್ಲೂಕು ಆಗಿದ್ದು, ತಾಲ್ಲೂಕುಮಟ್ಟದ ಅಧಿಕಾರಿಗಳು ಪ್ರತಿಹಳ್ಳಿಯಿಂದ ಬರಬಹುದಾದ



ಸಂಖ್ಯೆಗಳನ್ನು ತಿಳಿಸಲು ಸೂಚಿಸಿದ ಅವರು, ಮಾನವ ಸರಪಳಿ ಕಾರ್ಯಕ್ರಮಕ್ಕೆ ಅಗತ್ಯ ಸಿದ್ಧತೆಗಳನ್ನು ಕೈಗೊಳ್ಳಬೇಕು. ಮಕ್ಕಳ ಸುರಕ್ಷತಾ ದೃಷ್ಠಿಯಿಂದ ಮುಂಜಾಗ್ರತಾ ಕ್ರಮಗಳನ್ನು ಕೈಗೊಳ್ಳುವಂತೆ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸೂಚನೆ ನೀಡಿದರು.

ಮೊಳಕಾಲ್ಮುರು ತಹಶೀಲ್ದಾರ್ ಜಗದೀಶ್ ಮಾತನಾಡಿ, ಎಲ್ಲ ಇಲಾಖೆಯ ತಾಲ್ಲೂಕುಮಟ್ಟದ ಅಧಿಕಾರಿಗಳು, ಸಂಘ ಸಂಸ್ಥೆಗಳು, ಸರ್ಕಾರಿ, ಅರೆ ಸರ್ಕಾರಿ ನೌಕರರು ಸೇರಿದಂತೆ ಎಲ್ಲರೂ ಒಗ್ಗಟ್ಟಾಗಿ ಸೇರಿ ಕಾರ್ಯಕ್ರಮ ಯಶಸ್ವಿಗೊಳಿಸೋಣ ಎಂದು ಹೇಳಿದ ಅವರು, ಜಿಲ್ಲಾಡಳಿತ ವತಿಯಿಂದ ಸಂಚಾರ ವ್ಯವಸ್ಥೆಗೆ ವಾಹನ ಸೌಲಭ್ಯ ನೀಡಲಿದ್ದು, ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಬಸ್‌ಗಳನ್ನು ಕಳುಹಿಸಲಾಗುವುದು. ಕಾರ್ಯಕ್ರಮ ದಿನದಂದು ಬೆಳಿಗ್ಗೆ 7ಕ್ಕೆ ನಿಗಧಿಪಡಿಸಿದ ಸ್ಥಳಗಳಲ್ಲಿ ಕಾರ್ಯೋನ್ಮುಖರಾಗುವಂತೆ ತಿಳಿಸಿದರು.

ಕೃಷಿ ಇಲಾಖೆ ಜಂಟಿ ನಿರ್ದೇಶಕ ಮಂಜುನಾಥ್ ಮಾತನಾಡಿ, ಪ್ರತಿ 1 ಕಿ.ಮೀ, 5 ಕಿ.ಮೀ ವ್ಯಾಪ್ತಿಯಲ್ಲಿ ಎಲ್ಲ ತಾಲ್ಲೂಕು ಮತ್ತು ಜಿಲ್ಲಾಮಟ್ಟದ ಅಧಿಕಾರಿಗಳು ಶಿಷ್ಠಾಚಾರದಿಂದ ಕರ್ತವ್ಯ ನಿರ್ವಹಿಸಬೇಕು. ಗ್ರಾಮಪಂಚಾಯಿತಿ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಹಳ್ಳಿಗಳಲ್ಲಿ ಪ್ರಜಾಪ್ರಭುತ್ವ ದಿನಾಚರಣೆ ಕಾರ್ಯಕ್ರಮದ ಕುರಿತು ಮೂಡಿಸುವ ಮೂಲಕ ಅರ್ಥಪೂರ್ಣವಾಗಿ ಕಾರ್ಯಕ್ರಮ ನಿರ್ವಹಿಸುವುದು ಎಂದು ಹೇಳಿದರು.

ಪಿಎಸ್‌ಐ ಪಾಂಡುರಂಗಪ್ಪ ಮಾತನಾಡಿ, ಪ್ರಜಾಪ್ರಭುತ್ವ ದಿನಾಚರಣೆ ಮಾನವ ಸರಪಳಿ ಕಾರ್ಯಕ್ರಮದ ಅಂಗವಾಗಿ ಏಕಮುಖ ಸಂಚಾರ ವ್ಯವಸ್ಥೆಗೆ ಸಿದ್ಧತೆ ಮಾಡಿಕೊಳ್ಳಲಾಗಿದ್ದು, ಅಗತ್ಯ ಸಹಕಾರ ಒದಗಿಸುವ ಮೂಲಕ ಸೂಕ್ತ ಬಂದೋಬಸ್ತ್ ವ್ಯವಸ್ಥೆ ಮಾಡಿಕೊಳ್ಳಲಾಗುವುದು ಎಂದು ತಿಳಿಸಿದರು. ಸಭೆಯಲ್ಲಿ ಉಪ ಅರಣ್ಯ ಸಂರಕ್ಷಣಾಧಿಕಾರಿ ರಾಜಣ್ಣ, ತಾಲ್ಲೂಕು ಪಂಚಾಯಿತಿ ಕಾರ್ಯನಿರ್ವಾಹಕ ಅಧಿಕಾರಿ ಹನುಮಂತಪ್ಪ, ಕ್ಷೇತ್ರ ಶಿಕ್ಷಣಾಧಿಕಾರಿ ನಿರ್ಮಲಾ ದೇವಿ, ಪಟ್ಟಣ ಪಂಚಾಯಿತಿ ಮುಖ್ಯಾಧಿಕಾರಿ ಪಾಲಯ್ಯ ಸೇರಿದಂತೆ ವಿವಿಧ ಇಲಾಖೆ ಅಧಿಕಾರಿಗಳು ಇದ್ದರು.

# ಬ್ಯಾಡ್ಮಿಂಟನ್ ವಿಜೇತ ತಂಡಗಳಿಗೆ ಅಭಿನಂದನೆ

» **ಚಳ್ಳಕೆರೆ**

ನಗರದಬಿಎಂಸರ್ಕಾರಿಪ್ರೌಢಶಾಲಾಮೈದಾನದಲ್ಲಿ ಕಳೆದ ಎರಡು ದಿನಗಳಿಂದ ತಾಲ್ಲೂಕು ಮಟ್ಟದ ವಿವಿಧ ಕ್ರೀಡೆಗಳು ಯಶಸ್ವಿಯಾಗಿ ನಡೆಯುತ್ತಿದ್ದು, ವಿಶೇಷವಾಗಿ 14 ಮತ್ತು 17 ವಯಸ್ಸಿನ ಬಾಲಕ, ಬಾಲಕಿಯರ ಬ್ಯಾಡ್ಮಿಂಟನ್ ಪಂದ್ಯಾವಳಿಯಲ್ಲಿ ತಾಲ್ಲೂಕಿನ ಸುಮಾರು 40ಕ್ಕೂ ಹೆಚ್ಚು ತಂಡಗಳು ಭಾಗವಹಿಸಿ ಉತ್ತಮ ಪ್ರದರ್ಶನ ನೀಡಿವೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಕೆ.ಎಸ್.ಸುರೇಶ್ ಸಂತಸ ವ್ಯಕ್ತಪಡಿಸಿ, ವಿಜೇತ ತಂಡವನ್ನು ಅಭಿನಂದಿಸಿದರು.

14 ವಯಸ್ಸಿನ ಬಾಲಕರ ಹಿರಿಯಪ್ರಾಥಮಿಕ ಶಾಲಾ ವಿಭಾಗದಲ್ಲಿ ಪ್ರಥಮ ಬಹುಮಾನ ರೋಟರಿಮಾಕಂಸ್ ಪ್ರೌಢಶಾಲೆ, ದ್ವಿತೀಯ ಬಹುಮಾನ ಅಲ್ಪಸಂಖ್ಯಾತಮೊರಾರ್ಜಿ ವಸತಿಶಾಲೆ, ಬಾಲಕಿಯ ವಿಭಾಗದಲ್ಲಿ ಪ್ರಥಮ ಬಹುಮಾನ ಅಲ್ಪಸಂಖ್ಯಾತಮೊರಾರ್ಜಿ ವಸತಿಶಾಲೆ, ದ್ವಿತೀಯ ಬಹುಮಾನ ಹೊಂಗಿರಣ ಶಾಲೆ. 17 ವರ್ಷ ಬಾಲಕರ ವಿಭಾಗದಲ್ಲಿ ಪ್ರಥಮ ಸ್ಥಾನ ಅಲ್ಪಸಂಖ್ಯಾತಮೊರಾರ್ಜಿ ವಸತಿಶಾಲೆ, ದ್ವಿತೀಯ ಬಹುಮಾನ




ಕೃಷ್ಣಪ್ರೌಢಶಾಲೆ ಚನ್ನಮ್ಮನಾಗತಿಹಳ್ಳಿ, 17 ವರ್ಷ ಬಾಲಕಿಯರ ವಿಭಾಗದಲ್ಲಿ ಪ್ರಥಮ ಬಹುಮಾನ ಅಲ್ಪಸಂಖ್ಯಾತಮೊರಾರ್ಜಿ ವಸತಿಶಾಲೆ, ದ್ವಿತೀಯ ಬಹುಮಾನ ಇನ್‌ಫೆಂಟ್ ಜೀಸಸ್ ಪ್ರೌಢಶಾಲೆ ಪಡೆದಿದ್ದಾರೆ.ಪ್ರೌಢಶಾಲಾ ಮುಖ್ಯಶಿಕ್ಷಕರ ಸಂಘದ ಅಧ್ಯಕ್ಷ ಡಿ.ಟಿ.ಶ್ರೀನಿವಾಸ್, ಪ್ರಧಾನಕಾರ್ಯದರ್ಶಿ ಡಿ.ಎಸ್.ಪಾಲಯ್ಯ, ತಾಲ್ಲೂಕು ದೈಹಿಕ ಶಿಕ್ಷಣ ಪರಿವೀಕ್ಷಕ ಯು.ಸುನೀಲ್‌ನಾಯ್ಕ್, ಕರ್ನಾಟಕ ರಾಜ್ಯ ದೈಹಿಕ ಶಿಕ್ಷಣ ಶಿಕ್ಷಕರ ಸಂಘದ ತಾಲ್ಲೂಕುಪ್ರಧಾನ ಕಾರ್ಯದರ್ಶಿ ಎಸ್.ಶ್ರೀರಾಮನಾಯಕ, ದೈಹಿಕ ಶಿಕ್ಷಕರಾದ ಪಾಲಯ್ಯ, ಓಬಣ್ಣ, ಉಮೇಶ್, ಪಾಪಣ್ಣ, ತಿಪ್ಪೇಸ್ವಾಮಿ, ವಿ.ಈಶ್ವರಪ್ಪ, ಶ್ಯಾಮಸುಂದರ್, ತಿಪ್ಪೇರುದ್ರನಾಯಕ, ಬಸವರಾಜು, ರೂಪವತಿ, ಮಂಗಳ, ಪ್ರೇಮಲತಾ ಮುಂತಾದವರು ಉಪಸ್ಥಿತರಿದ್ದರು.

## ವಿಘ್ನೇಶನಿಂದ ಮಾತ್ರ ಸಮಸ್ಯೆಗಳಿಗೆ ಪರಿಹಾರ; ಅನಂತರಾಮ್ ಗೌತಮ್



» **ಚಳ್ಳಕೆರೆ**

ಕಳೆದ ಹಲವಾರು ವರ್ಷಗಳಿಂದ ಲೋಕಕಲ್ಯಾಣಕ್ಕಾಗಿ ನಗರದಲ್ಲಿ ಹಿಂದೂ ಮಹಾಗಣಪತಿ ಉತ್ಸವ ಯಶಸ್ವಿಯಾಗಿ ನಡೆಯುತ್ತಿದ್ದು, ಗಣೇಶನ ಕೃಪೆಯನ್ನು ಪಡೆಯಲು ನಾವೆಲ್ಲರೂ ಭಕ್ತಿ, ಶ್ರದ್ದೆಯಿಂದ ಪೂಜಿಸುವುದಲ್ಲದೆ, ನಾಡಿನ ಕಲ್ಯಾಣಕ್ಕಾಗಿ ಶ್ರಮಿಸುವ ಸಂಕಲ್ಪವನ್ನು ಮಾಡಬೇಕೆಂದು ಖ್ಯಾತಜ್ಯೋತಿಷಿ, ಧಾರ್ಮಿಕ ಚಿಂತಕ ಡಾ.ಅನಂತರಾಮ್‌ಗೌತಮ್ ತಿಳಿಸಿದರು.

ಅವರು, ಇಲ್ಲಿನ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ ಬಳಿ ಹಿಂದೂ ಮಹಾಗಣಪತಿ ಉತ್ಸವ ಸಮಿತಿ ಏರ್ಪಡಿಸಿದ್ದ ಗಣಹೋಮ, ಪೂಜೆ ಕಾರ್ಯಕ್ರಮದಲ್ಲಿ ಪಾಲ್ಗೊಂಡು ನೆರೆದಿದ್ದ ಭಕ್ತರನ್ನು ಉದ್ದೇಶಿಸಿ ಮಾತನಾಡಿದರು. ಸಾಮಾನ್ಯವಾಗಿ ಎಲ್ಲೆಡೆ ಗಣೇಶ ಎಂದರೆ ಎಲ್ಲರಿಗೂ ಹೆಚ್ಚು ಭಕ್ತಿ. ಪ್ರತಿಯೊಬ್ಬ ವ್ಯಕ್ತಿಯೂ ಗಣೇಶನನ್ನು ಪೂಜಿಸಲು ಹೆಚ್ಚು ಆಸಕ್ತನಾಗಿ ಕಾರ್ಯನಿರ್ವಹಿಸುತ್ತಾನೆ. ನಮ್ಮ ಧಾರ್ಮಿಕ ಪದ್ದತಿಗಳು ಸಹ ನಮ್ಮ ಒಳಿತಿಗಾಗಿದ್ದು, ಗಣೇಶನ ಉತ್ಸವ ನಮ್ಮೆಲ್ಲರಿಗೂ ಶಾಂತಿ, ನೆಮ್ಮದಿ ತರುವ ಕಾರ್ಯಕ್ರಮವಾಗಿದೆ. ಪ್ರತಿವರ್ಷ ಉತ್ಸವದಲ್ಲಿ ಭಾಗವಹಿಸುವವರ ಭಕ್ತಾಧಿಗಳ ಸಂಖ್ಯೆ ಹೆಚ್ಚುತ್ತಿದೆ. ವಿಶೇಷವಾಗಿ ಉತ್ಸವ ಸಮಿತಿಯ ಎಲ್ಲಾ ಪದಾಧಿಕಾರಿಗಳು ಪ್ರತಿವರ್ಷ ಗಣಹೋಮ ಪೂಜಾ ಕಾರ್ಯ ನಡೆಸುವ ಮೂಲಕ ನಾಡಿನ ಒಳಿತಿಗಾಗಿ ಪ್ರಾರ್ಥಿಸುತ್ತಾರೆ. ತಾಲ್ಲೂಕು ಬ್ರಾಹ್ಮಣ ಸಂಘ ಮತ್ತು ವಿಪ್ರಗಾಯಿತ್ರಿ ಮಹಿಳಾ ಮಂಡಳಿ ವತಿಯಿಂದ ಪೂಜೆಯಲ್ಲಿ ಪಾಲ್ಗೊಂಡು ಭಜನೆ, ಹಾಡುಗಳನ್ನು ಹಾಡುವ ಮೂಲಕಗಣೇಶನನ್ನು ಪ್ರಾರ್ಥಿಸಲಾಗಿದೆ ಎಂದರು.ವಿಶ್ವಹಿಂದೂಪರಿಷತ್‌ತಾಲ್ಲೂಕುಅಧ್ಯಕ್ಷಡಿ.ಎನ್.ಮಂಜುನಾಥ, ವಿಪ್ರಗಾಯಿತ್ರಿ ಮಹಿಳಾ ಮಂಡಳಿ ಅಧ್ಯಕ್ಷ ಸೀತಾಲಕ್ಷ್ಮಿವಾದಿರಾಜ್, ಕಾರ್ಯದರ್ಶಿ ಮಧುಮತಿ, ಜಯಲಕ್ಷ್ಮಿಸುಬ್ಬಣ್ಣ, ಶೈಲಜಾಸುಬ್ರಮಣ್ಯ, ಪಂಕಜಗೌತಮ್, ಗೀತಾ, ಕಾರ್ಯದರ್ಶಿ ಎಂ.ಸತ್ಯನಾರಾಯಣರಾವ್, ನಿರ್ದೇಶಕರಾದ ಜೆ.ಎಸ್.ಶ್ರೀನಾಥಶರ್ಮ, ಎಸ್.ವೈ.ಮುರುಳಿಕೃಷ್ಣ, ಸಿ.ಎಸ್.ಗೋಪಿನಾಥ, ಜಿ.ಕೃಷ್ಣಮೂರ್ತಿ, ಪ್ರಹ್ಲಾದ್ ಮುಂತಾದವರು ಪೂಜಾ ಕಾರ್ಯದಲ್ಲಿ ಭಾಗವಹಿಸಿದ್ದರು.

## ಬಿ.ಎ.ಪರಮೇಶ್ವರಪ್ಪ ಜಿಲ್ಲಾ ಕಾಂಗ್ರೆಸ್ ವೃತ್ತಿಪರ ವಿಭಾಗದ ಉಪಾಧ್ಯಕ್ಷ

» **ಚಿತ್ರದುರ್ಗ**

ಕರ್ನಾಟಕ ಪ್ರದೇಶ ಕಾಂಗ್ರೆಸ್ ಸಮಿತಿ ಅಧ್ಯಕ್ಷ ಡಿ.ಕೆ.ಶಿವಕುಮಾರ್‌ರವರ ಆದೇಶದಂತೆ ಜಿಲ್ಲಾ ಕಾಂಗ್ರೆಸ್ ವೃತ್ತಿಪರ ವಿಭಾಗದ ಜಿಲ್ಲಾ ಉಪಾಧ್ಯಕ್ಷರನ್ನಾಗಿ ಚಳ್ಳಕೆರೆ ವಿಠಲ್ ನಗರದ ವಾಸಿ ಬಿ.ಎ.ಪರಮೇಶ್ವರಪ್ಪ ಇವರನ್ನು ನೇಮಕ ಮಾಡಲಾಗಿದೆ. ಜಿಲ್ಲಾ ಕಾಂಗ್ರೆಸ್ ಕಚೇರಿಯಲ್ಲಿ ಬಿ.ಎ.ಪರಮೇಶ್ವರಪ್ಪನವರಿಗೆ ನೇಮಕ ಪತ್ರವಿತರಿಸಿ ಮಾತನಾಡಿದ ಜಿಲ್ಲಾ ಕಾಂಗ್ರೆಸ್ ಅಧ್ಯಕ್ಷ ಎಂ.ಕೆ.ತಾಜ್‌ಪೀರ್, ಪಕ್ಷದಲ್ಲಿ ಯಾವುದೇ ಹುದ್ದೆಯನ್ನು ಪಡೆದುಕೊಂಡು ಮನೆಯಲ್ಲಿ ಕುಳಿತುಕೊಂಡರೆ ಪ್ರಯೋಜನವಿಲ್ಲ. ಜಿಲ್ಲೆಯಾದ್ಯಂತ ಸಂಚರಿಸಿ ವೃತ್ತಿಪರ ವಿಭಾಗವನ್ನು ಸಂಘಟಿಸಿ ಪಕ್ಷಕ್ಕೆ ಶಕ್ತಿ ತುಂಬುವಲ್ಲಿ ಪ್ರಾಮಾಣಿಕವಾಗಿ ಶ್ರಮಿಸುವಂತೆ ಸೂಚಿಸಿದರು. ಜಿಲ್ಲಾ ಕಾಂಗ್ರೆಸ್ ಪ್ರಧಾನ ಕಾರ್ಯದರ್ಶಿ ಡಿ.ಎನ್.ಮೈಲಾರಪ್ಪ, ಉಪಾಧ್ಯಕ್ಷ ಎಸ್.ಎನ್.ರವಿಕುಮಾರ್, ವೃತ್ತಿಪರ ವಿಭಾಗದ




ಅಧ್ಯಕ್ಷ ಮಹಡಿ ಶಿವಮೂರ್ತಿ, ಅಬ್ದುಲ್ಲಾ, ಹಿಂದುಳಿದ ವರ್ಗಗಳ ವಿಭಾಗದ ಅಧ್ಯಕ್ಷ ಎನ್.ಡಿ.ಕುಮಾರ್, ಮುದಾಸಿರ್‌ನವಾಜ್, ಸೈಯದ್ ಸೈಫುಲ್ಲಾ, ಎಸ್ಸಿ.ಘಟಕದ ಜಿಲ್ಲಾ ಕಾರ್ಯದರ್ಶಿ ದೇವರಾಜ್ ಈ ಸಂದರ್ಭದಲ್ಲಿ ಹಾಜರಿದ್ದರು.

**ಪ್ರಮುಖ ಸುದ್ದಿ**

# ರಾಹುಲ್ ಹೇಳಿಕೆ ವಿರೋಧಿಸಿ ಬಿಜೆಪಿ ಪ್ರತಿಭಟನೆ

» **ಚಿತ್ರದುರ್ಗ**

ಕೇಂದ್ರದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬಂದರೆ ಪರಿಶಿಷ್ಟ ಜಾತಿ ಪರಿಶಿಷ್ಟ ವರ್ಗದವರ ಮೀಸಲಾತಿ ರದ್ದುಪಡಿಸುತ್ತೇವೆಂದು ರಾಹುಲ್‌ಗಾಂಧಿ ವಿದೇಶದಲ್ಲಿ ಕುಳಿತು ಹೇಳಿರುವುದನ್ನು ವಿರೋಧಿಸಿ ಬಿಜೆಪಿ. ವತಿಯಿಂದ ನಗರದ ಒನಕೆ ಓಬವ್ವ ವೃತ್ತದಲ್ಲಿ ಶುಕ್ರವಾರ ಪ್ರತಿಭಟನೆ ನಡೆಸಲಾಯಿತು.

ಪ್ರತಿಭಟನೆಯನ್ನುದ್ದೇಶಿಸಿ ಮಾತನಾಡಿದ ಬಿಜೆಪಿ.ಜಿಲ್ಲಾ ಪ್ರಧಾನ ಕಾರ್ಯದರ್ಶಿ ಜಿ.ಟಿ.ಸುರೇಶ್‌ಸಿದ್ದಾಪುರ ವಿರೋಧ ಪಕ್ಷದ ನಾಯಕ ರಾಹುಲ್‌ಗಾಂಧಿ ಪರಿಶಿಷ್ಟ ಜಾತಿ ಪರಿಶಿಷ್ಟ ವರ್ಗದವರ ಮೀಸಲಾತಿ ತೆಗೆಯುತ್ತೇವೆಂದು ಅಮೇರಿಕಾದಲ್ಲಿ ಹೇಳಿರುವುದನ್ನು ನೋಡಿದರೆ ದಲಿತರನ್ನು ಕೇವಲ ಮತಕ್ಕಾಗಿ ಬಳಸಿಕೊಳ್ಳುತ್ತಿದ್ದಾರೆನ್ನುವುದು ಖಚಿತವಾಯಿತು. ದೇಶಕ್ಕೆ ಸಂವಿಧಾನವನ್ನು ಕೊಡುಗೆಯಾಗಿ ನೀಡಿದ ಡಾ.ಬಿ.ಆರ್. ಅಂಬೇಡ್ಕರ್‌ರವರನ್ನು ಎರಡು ಬಾರಿ ಪಾರ್ಲಿಮೆಂಟ್ ಚುನಾವಣೆಯಲ್ಲಿ ಸೋಲಿಸಿದ ಕೀರ್ತಿ ಕಾಂಗ್ರೆಸ್‌ಗೆ ಸಲ್ಲುತ್ತದೆ. ಎಸ್ಸಿ.ಪಿ. ಟಿ.ಎಸ್ಪಿ. ಯೋಜನೆಯ 25 ಸಾವಿರ ಕೋಟಿ ರೂ.ಗಳನ್ನು ರಾಜ್ಯ ಸರ್ಕಾರ ಅನ್ಯ ಉದ್ದೇಶಕ್ಕೆ ಬಳಸಿಕೊಂಡಿರುವುದು ಯಾವ ನ್ಯಾಯ ಎಂದು ಪ್ರಶ್ನಿಸಿದರು?

ಕರ್ನಾಟಕ ವಾಲ್ಮೀಕಿ ಅಭಿವೃದ್ಧಿ



ನಿಗಮದಲ್ಲಿ 187 ಕೋಟಿ ರೂ. ಲೂಟಿ ಹೊಡೆದಿರುವ ದಲಿತ ವಿರೋಧಿ ಕಾಂಗ್ರೆಸ್ ಡಾ.ಬಿ.ಆರ್.ಅಂಬೇಡ್ಕರ್ ಅಂತ್ಯಕ್ರಿಯೆಗೂ ಜಾಗ ಕೊಡಲಿಲ್ಲ. ರಾಹುಲ್‌ಗಾಂಧಿ ತನ್ನ ಹೇಳಿಕೆಯನ್ನು ಹಿಂದಕ್ಕೆ ಪಡೆದು ದೇಶದ ಜನರ ಕ್ಷಮೆ ಕೇಳಬೇಕು. ಇಲ್ಲವಾದಲ್ಲಿ ರಾಜ್ಯಾದ್ಯಂತ ಉಗ್ರ ಹೋರಾಟ ನಡೆಸಲಾಗುವುದೆಂದು ಜಿ.ಟಿ.ಸುರೇಶ್ ಸಿದ್ದಾಪುರ ಎಚ್ಚರಿಸಿದರು.ನಗರಸಭೆ ಸದಸ್ಯ ಹೆಚ್.ಶ್ರೀನಿವಾಸ್ ಮಾತನಾಡುತ್ತ ಮೂರನೆ ಬಾರಿಗೆ ದೇಶದ ಪ್ರಧಾನಿಯಾಗಿರುವ ನರೇಂದ್ರಮೋದಿಯನ್ನು ಅಸ್ಥಿರಗೊಳಿಸಲು ರಾಹುಲ್‌ಗಾಂಧಿ ಇಂತಹ ಹುಚ್ಚು ಹೇಳಿಕೆಗಳನ್ನು ನೀಡುತ್ತಿದ್ದಾರೆ. ಮಂಡ್ಯ ಜಿಲ್ಲೆ ನಾಗಮಂಗಲದಲ್ಲ ಗಣಪತಿ ವಿಸರ್ಜನೆ ಮೆರವಣಿಗೆ ವೇಳೆ ಹಿಂದು-ಮುಸಲ್ಮಾನರ ನಡುವೆ ನಡೆದ ಕೋಮುಗಲಭೆಗೆ ಕಾಂಗ್ರೆಸ್ ಕಾರಣ. ಕೇಂದ್ರದಲ್ಲಿ ಕಾಂಗ್ರೆಸ್ ಅಧಿಕಾರಕ್ಕೆ ಬರುತ್ತದೆಂಬ ಹಗಲು ಗನಸು ಕಾಣುತ್ತಿರುವ ರಾಹುಲ್‌ಗಾಂಧಿ ಭಾರತದಲ್ಲಿ ಪರಿಶಿಷ್ಟ ಜಾತಿ ಪರಿಶಿಷ್ಟ ವರ್ಗಗಳ ಮೀಸಲಾತಿಯನ್ನು ರದ್ದುಪಡಿಸುವುದಾಗಿ ಅಮೇರಿಕಾದಲ್ಲಿ ಹೇಳಿರುವುದು ಹುರುಳಿಲ್ಲದ ಮಾತು. ಒಬ್ಬ ನರೇಂದ್ರಮೋದಿಯನ್ನು ಅಧಿಕಾರದಿಂದ ಕೆಳಗಿಳಿಸಿದರೆ ಯೋಗಿ ಆದಿತ್ಯನಾಥ್‌ರಂತವರು ಹುಟ್ಟಿಕೊಳ್ಳುತ್ತಾರೆಂದು ರಾಹುಲ್‌ಗಾಂಧಿ ಹೇಳಿಕೆಗೆ ತಿರುಗೇಟು ನೀಡಿದರು.

ಬಿಜೆಪಿ.ಜಿಲ್ಲಾ ಪ್ರಧಾನ ಕಾರ್ಯದರ್ಶಿ ಸಂಪತ್‌ಕುಮಾರ್ ಮಾತನಾಡಿ ಎಸ್ಸಿ. ಎಸ್ಟಿ.ಗಳ ಮೀಸಲಾತಿಯನ್ನು ತೆಗೆದು ಹಾಕುತ್ತೇವೆಂದು ರಾಹುಲ್‌ಗಾಂಧಿ ವಿದೇಶದಲ್ಲಿ ಬಾಯಿಗೆ ಬಂದಂತೆ ಹೇಳಿಕೆ ನೀಡಿ ಪರಿಶಿಷ್ಟ ಜಾತಿ, ಪರಿಶಿಷ್ಟ ವರ್ಗಗಳ ವಿರೋಧಿಗಳು ಎನ್ನುವ ಅರ್ಥದಲ್ಲಿ ಮಾತನಾಡಿದ್ದಾರೆ. ದೇಶದ ಜನರ ಕ್ಷಮೆ ಕೇಳಬೇಕೆಂದು ಎಚ್ಚರಿಸಿದರು.

ನಗರ ಮಂಡಲ ಅಧ್ಯಕ್ಷ ನವೀನ್ ಚಾಲುಕ್ಯ, ಗ್ರಾಮಾಂತರ ಮಂಡಲ ಅಧ್ಯಕ್ಷ ಕಲ್ಲೇಶಯ್ಯ, ಮಾಧ್ಯಮ ವಕ್ತಾರ ದಗ್ಗೆಶಿವಪ್ರಕಾಶ್, ವಕ್ತಾರ ನಾಗರಾಜ್‌ಬೇದ್ರೆ, ಖಜಾಂಚಿ ಮಾಧುರಿ ಗಿರೀಶ್, ಶಿವಣ್ಣಾಚಾರಿ,

ಎಸ್ಸಿ.ಮೋರ್ಚಾ ಅಧ್ಯಕ್ಷ ತಿಪ್ಪೇಸ್ವಾಮಿ, ಮಂಜು, ಕೃಷ್ಣ, ಪ್ರಕಾಶ್, ಬಸವೇಶ್, ಶಂಭು, ಪಲ್ಲವಿ ಪ್ರಸನ್ನ, ಜಿಲ್ಲಾ ಪಂಚಾಯಿತಿ ಮಾಜಿ ಅಧ್ಯಕ್ಷೆ ಸೌಭಾಗ್ಯ ಬಸವರಾಜನ್, ಕಿರಣ್, ಪಾಂಡು, ಪರಶುರಾಮ್, ಭರತ್, ಜನಾರ್ಧನಸ್ವಾಮಿ, ರಾಮು, ವಸಂತಕುಮಾರ್, ವೀರೇಶ್‌ಜಾಲಿಕಟ್ಟೆ, ನಗರಸಭೆ ಸದಸ್ಯ ಹರೀಶ್, ಪ್ರಭು, ಉದಯ್, ಮಹಿಳಾ ಘಟಕದ ಜಿಲ್ಲಾಧ್ಯಕ್ಷ ಶೈಲಜಾರೆಡ್ಡಿ, ಉಪಾಧ್ಯಕ್ಷೆ ಶ್ಯಾಮಲಶಿವಪ್ರಕಾಶ್, ಎಸ್ಸಿ.ಮೋರ್ಚಾ ರಾಜ್ಯ ಕಾರ್ಯಕಾರಿಣಿ ಸದಸ್ಯೆ ಭಾರ್ಗವಿ ದ್ರಾವಿಡ್, ಪ್ರಧಾನ ಕಾರ್ಯದರ್ಶಿ ಶಾಂತಮ್ಮ, ಬಸಮ್ಮ, ಭಾರತಿ, ವೀಣ, ರಜಿನಿ, ಕವನ, ಕವಿತ ಇನ್ನು ಅನೇಕರು ಪ್ರತಿಭಟನೆಯಲ್ಲಿ ಪಾಲ್ಗೊಂಡಿದ್ದರು.

## ಫಾಸ್ಟ್ ನ್ಯೂಸ್

### ಸ್ವಚ್ಛತಾ ಹೀ ಸೇವಾ ಪಾಕ್ಷಿಕ ಕಾರ್ಯಕ್ರಮ

» ಚಿತ್ರದುರ್ಗ

ಹೊಳಲ್ಕೆರೆ ಪುರಸಭೆ ವತಿಯಿಂದ ಸೆ.14 ರಿಂದ ಅ.02ರವರೆಗೆ ಪುರಸಭೆ ವ್ಯಾಪ್ತಿಯಲ್ಲಿ ಸ್ವಚ್ಛತಾ ಹೀ ಸೇವಾ ಪಾಕ್ಷಿಕ-2024 ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ. 'ಸ್ವಚ್ಛತೆಯ ಸಹಭಾಗಿತ್ವ ಮತ್ತು ಸ್ವಚ್ಛತೆ ಸೇವೆ ಒಂದೇ ನಮ್ಮ ಗುರಿ' ಎಂಬ ಶೀರ್ಷಿಕೆಯಡಿ ತಾಲ್ಲೂಕು ಆಡಳಿತ, ಶಿಕ್ಷಣ, ಆರೋಗ್ಯ, ಮಹಿಳಾ ಮತ್ತು ಮಕ್ಕಳ ಇಲಾಖೆ ಹಾಗೂ ಶಾಲೆ, ಸಂಘ ಸಂಸ್ಥೆಗಳ ಸಹಯೋಗದಲ್ಲಿ ಅರಿವು ಕಾರ್ಯಕ್ರಮಗಳನ್ನು ನಡೆಸಲಾಗುವುದು. ಕಾರ್ಯಕ್ರದ ವಿವರಗಳು ಪುರಸಭೆ ಕಚೇರಿ ಮುಂಭಾಗದಲ್ಲಿ ಪ್ರಚುರ ಪಡಿಸಲಾಗಿದೆ. ಸ್ವಯಂ ಸೇವಾ ಸಂಘ ಸಂಸ್ಥೆ ಹಾಗೂ ಸಾರ್ವಜನಿಕರು ಹೆಚ್ಚಿನಸಂಖ್ಯೆಯಲ್ಲಿಭಾಗವಹಿಸಿಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ಪುರಸಭೆ ಮುಖ್ಯಾಧಿಕಾರಿ ರಾಧಾ.ಆರ್. ತಿಳಿಸಿದ್ದಾರೆ.

### ಅಂಗನವಾಡಿ ಕಾರ್ಯಕರ್ತೆ, ಸಹಾಯಕಿಯರ ನೇಮಕಾತಿ ಅವಧಿ ವಿಸ್ತರಣೆ

» ದಾವಣಗೆರೆ

ದಾವಣಗೆರೆ ಜಿಲ್ಲೆಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯಡಿ ಕಾರ್ಯನಿರ್ವಹಿಸುತ್ತಿರುವ ಚನ್ನಗಿರಿ ತಾಲ್ಲೂಕಿನ ಶಿಶು ಅಭಿವೃದ್ಧಿ ಯೋಜನೆಗಳ ವ್ಯಾಪ್ತಿಯಲ್ಲಿ ಬರುವ ಅಂಗನವಾಡಿ ಕೇಂದ್ರಗಳಲ್ಲಿ ಖಾಲಿ ಇರುವ 16 ಅಂಗನವಾಡಿ ಕಾರ್ಯಕರ್ತೆ ಹಾಗೂ 52 ಅಂಗನವಾಡಿ ಸಹಾಯಕಿಯರ ಗೌರವ ಸೇವೆಯ ಹುದ್ದೆಗೆ ಮಹಿಳಾ ಹಾಗೂ ಲಿಂಗತ್ವ ಅಲ್ಪಸಂಖ್ಯಾತ ಅಭ್ಯರ್ಥಿಗಳಿಂದ ಈಗಾಗಲೇ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸುವ ಅವಧಿಯನ್ನು ಅಕ್ಟೋಬರ್ 9 ವರೆಗೆ ವಿಸ್ತರಿಸಲಾಗಿದೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ರಾಜಾನಾಯ್ಕ ತಿಳಿಸಿದ್ದಾರೆ.

### ಪಾಲಿಕೆ ಮೇಯರ್, ಉಪಮೇಯರ್ ಚುನಾವಣೆ




» ದಾವಣಗೆರೆ

ದಾವಣಗೆರೆ ಮಹಾನಗರಪಾಲಿಕೆ ಮಹಾಪೌರ, ಉಪಮಹಾಪೌರ ಸ್ಥಾನದ ಆಯ್ಕೆಗೆ ಸೆಪ್ಟೆಂಬರ್.27 ರಂದು ಮಹಾನಗರಪಾಲಿಕೆ ಸಭಾಂಗಣದಲ್ಲಿ ಪ್ರಾದೇಶಿಕ ಆಯುಕ್ತರಾದ ಅಮ್ಲಾನ್ ಆದಿತ್ಯ ಬಿಸ್ವಾಸ್ ಅಧ್ಯಕ್ಷತೆಯಲ್ಲಿ ಚುನಾವಣೆ ನಡೆಯಲಿದೆ. ಸೆ.27 ರ ಬೆಳಿಗ್ಗೆ 12 ಗಂಟೆಯಿಂದ ಮಧ್ಯಾಹ್ನ 1 ಗಂಟೆ ವರೆಗೆ ನಾಮಪತ್ರಗಳ ಸ್ವೀಕಾರ, ಮಧ್ಯಾಹ್ನ 3 ಗಂಟೆ ನಂತರ ನಾಮಪತ್ರಗಳ ಪರಿಶೀಲನೆ, ಕ್ರಮಬದ್ಧ ನಾಮಪತ್ರಗಳ ಘೋಷಣೆ, ಉಮೇದುವಾರಿಕೆಯನ್ನು ಹಿಂತೆಗೆದುಕೊಳ್ಳುವುದು, ಉಮೇದುವಾರರ ಪಟ್ಟಿ ಘೋಷಣೆ, ಅವಿರೋಧ ಆಯ್ಕೆಯಾದಲ್ಲಿ ಫಲಿತಾಂಶ ಘೋಷಣೆ, ಚುನಾವಣೆ ಅಗತ್ಯವಿದ್ದಲ್ಲಿ ಕೈ ಎತ್ತುವ ಮೂಲಕ ಮತದಾನ, ಸದಸ್ಯರ ಸಹಿ ದಾಖಲಿಸುವುದು, ಮತಗಳ ಎಣಿಕೆ ಹಾಗೂ ಫಲಿತಾಂಶ ಘೋಷಣೆ ಮಾಡಲಾಗುವುದು ಎಂದು ಮಹಾನಗರ ಪಾಲಿಕೆ ಆಯುಕ್ತರಾದ ರೇಣುಕಾ ತಿಳಿಸಿದ್ದಾರೆ.

### ಅಪ್ರೆಂಟೀಸ್ ತರಬೇತಿಗಾಗಿ ಅರ್ಜಿ

» ದಾವಣಗೆರೆ

ಹೆಚ್.ಎ.ಎಲ್ ಬೆಂಗಳೂರು ಇವರು ಐ.ಟಿ.ಐ. ತೇರ್ಗಡೆ ಹೊಂದಿದ ಅಭ್ಯರ್ಥಿಗಳಿಂದ ಅಪ್ರೆಂಟೀಸ್ ತರಬೇತಿಗಾಗಿ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ನಮೂನೆಯನ್ನು ದಾವಣಗೆರೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ಪಡೆದುಕೊಂಡು, ಭರ್ತಿ ಮಾಡಿದ ಅರ್ಜಿಯನ್ನು ಅಕ್ಟೋಬರ್ 5 ರೊಳಗಾಗಿ ಕಚೇರಿಗೆ ಸಲ್ಲಿಸಬೇಕು. ಅಭ್ಯರ್ಥಿಗಳು http://apprenticeshipindia.gov.in ಈ ವೆಬ್‌ಸೈಟ್‌ನಲ್ಲಿ ಅಪ್ರೆಂಟೀಸ್‌ಗಾಗಿ ನೋಂದಾಯಿಸಿ, ಕಡ್ಡಾಯವಾಗಿ ನೋಂದಣಿ ಸಂಖ್ಯೆಯನ್ನು ತರತಕ್ಕದ್ದು, ಹೆಚ್ಚಿನ ಮಾಹಿತಿಗೆ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ, ಜಿಲ್ಲಾ ಆಡಳಿತ ಭವನ, ದಾವಣಗೆರೆ ದೂ.ಸಂ:08192-259446,7406323294 ಸಂಪರ್ಕಿಸಲು ಉದ್ಯೋಗಾಧಿಕಾರಿ ರವೀಂದ್ರ ತಿಳಿಸಿದ್ದಾರೆ.

### ವಾರ್ಷಿಕ ಮಹಾಸಭೆ

» ಚಿತ್ರದುರ್ಗ

ಮೆದೇಹಳ್ಳಿ ರಸ್ತೆಯಲ್ಲಿರುವ ಇಲಾಹಿ ಕ್ರೆಡಿಟ್ ಕೋ-ಆಪರೇಟಿವ್ ಸೊಸೈಟಿಯ 60 ನೇ ವರ್ಷದ ಸರ್ವ ಸದಸ್ಯರ ವಾರ್ಷಿಕ ಮಹಾಸಭೆ ಸೊಸೈಟಿ ಅಧ್ಯಕ್ಷ ಮಹಮದ್ ನಿಜಾಮುದ್ದಿನ್ ಅಧ್ಯಕ್ಷತೆಯಲ್ಲಿ ಸೆ.19 ರಂದು ಬೆಳಿಗ್ಗೆ 11 ಕ್ಕೆ ಟಿ.ಎಂ. ಕೆ.ಕಾಂಪೌಂಡ್‌ನಲ್ಲಿರುವ ಅಹಮದ್ ಪ್ಯಾಲೇಸ್‌ನಲ್ಲಿ ನಡೆಯಲಿದೆ. ಸರ್ವ ಸದಸ್ಯರು ತಪ್ಪದೆ ವಾರ್ಷಿಕ ಮಹಾಸಭೆಯಲ್ಲಿ ಭಾಗವಹಿಸುವಂತೆ ಸೊಸೈಟಿ ವ್ಯವಸ್ಥಾಪಕರು ವಿನಂತಿಸಿದ್ದಾರೆ.

# ಸತ್ಯವ್ರತಿಯ ಸ್ಪಷ್ಟಪದಿಗಳು ಗ್ರಂಥ ಲೋಕಾರ್ಪಣೆ



» ಚಿತ್ರದುರ್ಗ

ಇಡಿ ಜಗತ್ತು ಕ್ರೂರವಾಗುತ್ತಿರುವ ಇಂದಿನ ಕಾಲಘಟ್ಟದಲ್ಲಿ ಕಾವ್ಯ ಮನುಷ್ಯ-ಮನುಷ್ಯರ ನಡುವೆ ಬಾಂಧವ್ಯ ಬೆಸೆ ಯುವ ಸಾಧನವಾಗಬೇಕೆಂದು ಹಂಪಿ ಕನ್ನಡ ವಿಶ್ವವಿದ್ಯಾನಿಲಯ ಕುಲಪತಿ ಡಾ.ಡಿ.ವಿ. ಪರಮಶಿವಮೂರ್ತಿ ಅಭಿಪ್ರಾಯಪಟ್ಟರು.

ಜಿಲ್ಲಾ ಶರಣ ಸಾಹಿತ್ಯ ಪರಿಷತ್ತು, ರೋಟರಿ ಕ್ಲಬ್ ಫೋರ್ಟ್ ಚಿತ್ರದುರ್ಗ, ಮುಕ್ತ ವೇದಿಕೆ ಇವುಗಳ ಸಂಯುಕ್ತಾಶ್ರಯದಲ್ಲಿ ಆರ್ಥಿಕ ಚಿಂತಕ ಡಾ.ಜಿ.ಎನ್.ಮಲ್ಲಿಕಾರ್ಜುನಪ್ಪನವರ ಸತ್ಯವ್ರತಿಯ ಸ್ಪಷ್ಟಪದಿಗಳು ಗ್ರಂಥ ಲೋಕಾರ್ಪಣೆಯನ್ನು ಮೆದೆಹಳ್ಳಿ ರಸ್ತೆಯ ಮರುಳಪ್ಪ ಬಡಾವಣೆಯಲ್ಲಿರುವ ಆದಿಶೇಷ ರೋಟರಿ ಭವನದಲ್ಲಿ ಶುಕ್ರವಾರ ಬಿಡುಗಡೆಗೊಳಿಸಿ ಮಾತನಾಡಿದರು.

ಹನ್ನೆರಡನೆ ಶತಮಾನದಲ್ಲಿ ಸಮಾಜವನ್ನು ಸರಿದಾರಿಗೆ ತರಲು ಬಯಸಿದ ವಚನಕಾರರ ಪ್ರಯತ್ನ ಈ ಕೃತಿಯಲ್ಲಿ ಮುಂದುವರೆದಿದೆ. ಆತಂಕದ ಕಾಲ ಇದಾಗಿರುವುದರಿಂದ ನೂರಾರು ಸಾವಿರಾರು ವಚನಕಾರರ ಅಗತ್ಯವಿದೆ. ಮನುಷ್ಯನ ಮನಸ್ಸು, ಅಭಿಪ್ರಾಯ, ಕಾರ್ಯಗಳು ಕ್ರೂರತ್ವದ ಕಡೆ ಹೋಗುತ್ತಿದೆ. ವಚನಕಾರರ ಪ್ರಯತ್ನ ಎಲ್ಲೆಡೆ ದಟ್ಟವಾಗಿ ಹರಡಬೇಕು. ಅಹಂಕಾರ, ಕ್ರೌರ್ಯ ತುಂಬಿಕೊಂಡು ಮೆರೆಯುತ್ತಿರುವವರು ಒಮ್ಮೆ ಆತ್ಮವಿಮರ್ಶೆ ಮಾಡಿಕೊಳ್ಳಬೇಕೆಂದು ಹೇಳಿದರು.

ಡಾ.ಜಿ.ಎನ್.ಮಲ್ಲಿಕಾರ್ಜುನಪ್ಪನವರ ಸತ್ಯವ್ರತಿಯ ಸ್ಪಷ್ಟಪದಿಗಳು ಅಬ್ಬರ, ಬಿರುಸಿಲ್ಲದೆ ಮೌನ ನವಿರಾಗಿ ಸಮಾಜದಲ್ಲಿ ಬದಲಾವಣೆಗೆ ಪ್ರಯತ್ನ ಮಾಡಿದೆ. ದಾರ್ಶನಿಕರು ವಚನಕಾರರು ಬಯಸಿದಂತೆ ಕೆಟ್ಟ ಮನಸ್ಸುಗಳನ್ನು ಸರಿದಾರಿಗೆ ತರುವ ಪ್ರಯತ್ನ ಕೃತಿಯಲ್ಲಿದೆ. ಕಾಲ ಎಲ್ಲವನ್ನು ಹಿಂದಕ್ಕೆ ಸರಿಸುತ್ತಿದೆ. ಮಂಡನೆ, ಮರು ಮಂಡನೆ ಬೇಕು. ಇದೊಂದು ಅನುಭಾವಿಯ ಕಾವ್ಯ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

ಇತಿಹಾಸ ಸಂಶೋಧಕ ಡಾ.ಬಿ.ರಾಜಶೇಖರಪ್ಪ ಗ್ರಂಥಾವಲೋಕನ ಕುರಿತು ಮಾತನಾಡುತ್ತ ಡಾ.ಜಿ.ಎನ್. ಮಲ್ಲಿಕಾರ್ಜುನಪ್ಪನವರು ಪ್ರಾಧ್ಯಾಪಕಾರಿಗಿದ್ದುಕೊಂಡೆ ಕವನ, ಕಾವ್ಯ, ನಾಟಕಗಳನ್ನು ಬರೆಯಲು ಆರಂಭಿಸಿದರು. ಸಾಹಿತ್ಯವನ್ನು ನಾನಾಅಂಗಗಳಲ್ಲಿತೊಡಗಿಸಿಕೊಂಡವರು. ಇತ್ತೀಚೆಗೆ ಎಲ್ಲರನ್ನು ಅಗಲಿದ ಅವರ ಶ್ರೀಮತಿ ಸುಲೋಚನಾ ಡಾ.ಜಿ.ಎನ್. ಮಲ್ಲಿಕಾರ್ಜುನಪ್ಪನವರು ಸೌಜನ್ಯಶೀಲ ಮಹಿಳೆ ಎನ್ನುವುದನ್ನು ಸ್ಮರಿಸಿದರು.

ಸಾಹಿತಿಗಳು ಆಶ್ಚರ್ಯ ಪಡುವ ರೀತಿಯಲ್ಲಿ ಡಾ.ಜಿ.ಎನ್. ಮಲ್ಲಿಕಾರ್ಜುನಪ್ಪನವರು ಕೃತಿಯನ್ನು ರಚಿಸಿದ್ದಾರೆ. ನಡೆ ನುಡಿಯಲ್ಲಿ ಸತ್ಯವಾಗಿ ನಡೆಯಬೇಕೆಂದು ಬಯಸಿದವರು ಸತ್ಯವತಿ ಎನ್ನುವುದು ಕೃತಿಯ ಸಾರಾಂಶ. ಒಂದು ರೀತಿಯಲ್ಲಿ ಈ ಗ್ರಂಥ ವಚನಗಳನ್ನು ಹೋಲುತ್ತದೆ. ಭೂಮಿಯಲ್ಲಿರುವ ಎಲ್ಲಾ ವಿಚಾರಗಳನ್ನು ಕೃತಿ ಒಳಗೊಂಡಿದೆ. ಹಾಗಾಗಿ ಡಾ.ಜಿ.ಎನ್. ಮಲ್ಲಿಕಾರ್ಜುನಪ್ಪನವರು ಸಾಹಿತ್ಯ ಕ್ಷೇತ್ರದಲ್ಲಿ ದೃಢ ಹೆಜ್ಜೆಗಳನ್ನಿಟ್ಟಿದ್ದಾರೆಂದು ಬಣ್ಣಿಸಿದರು.

ಗ್ರಂಥ ಲೋಕಾರ್ಪಣೆ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿದ ಜಾನಪದ ವಿದ್ವಾಂಸ ಡಾ.ಮೀರಾಸಾಬಿಹಳ್ಳಿ ಶಿವಣ್ಣ ವಚನಗಳ ರೂಪದಲ್ಲಿ ಅನ್ವೇಷಣೆ, ಅಭಿವ್ಯಕ್ತಿ, ಮಾನವೀಯ ಅಂತಃಕರಣಗಳ ಮೌಲ್ಯಗಳು ಬರಹಗಾರನಿಗಿರಬೇಕು. ಇಲ್ಲದಿದ್ದರೆ ಸಾಮಾಜಿಕ ಹೊಣೆಗಾರಿಕೆ ನಿಭಾಯಿಸಲು ಸಾಧ್ಯವಿಲ್ಲ. ಮನುಷ್ಯ-ಮನುಷ್ಯನ ಸಂಬಂಧ, ಪ್ರೀತಿ ವಿಶ್ವಾಸದ ಬಗ್ಗೆ ದೊಡ್ಡ ಕಲ್ಪನೆಯಿಟ್ಟುಕೊಂಡು ಡಾ.ಜಿ.ಎನ್.ಮಲ್ಲಿಕಾರ್ಜುನಪ್ಪ ಕೃತಿಯನ್ನು ಬರೆದಿದ್ದಾರೆ. ಶ್ರೀಮತಿಯನ್ನು ಕಳೆದುಕೊಂಡ ನೋವಿನಲ್ಲಿಯೂ ಗ್ರಂಥ ಹೊರತಂದಿರುವುದು ನಿಜಕ್ಕೂ ಅವರಲ್ಲಿನ ಸಮಾಧಾನ, ಧೈರ್ಯಕ್ಕೆ ಸಾಕ್ಷಿ ಎಂದು ಪ್ರಶಂಶಿಸಿದರು.

ಜಿಲ್ಲಾ ಶರಣ ಸಾಹಿತ್ಯ ಪರಿಷತ್ ಅಧ್ಯಕ್ಷ ಡಾ.ಕೆ.ಎಂ.ವೀರೇಶ್ ಮಾತನಾಡುತ್ತ ಡಾ.ಜಿ.ಎನ್.ಮಲ್ಲಿಕಾರ್ಜುನಪ್ಪ ವೃತ್ತಿಯಲ್ಲೆ ಪ್ರಾಧ್ಯಾಪಕರಾಗಿದ್ದುಕೊಂಡು ದಕ್ಷ ಆಡಳಿವನ್ನು ನಡೆಸಿದರು. ಅನೇಕ ಕಥೆ, ಕವನ, ನಾಟಕ, ಕೃತಿಗಳನ್ನು ರಚಿಸಿದ್ದಾರೆ. ಇದೊಂದು ಅಪರೂಪದ ಸಾಹಿತ್ಯ, ಬೇರೆ ಬೇರೆ ವಚನ ಸರ್ವಜ್ಞನ ವಚನಗಳನ್ನು ಕೇಳಿದ್ದೇವೆ. ಸಾಹಿತ್ಯವೆಂದರೆ ಪ್ರತಿಬಿಂಬದ ಕನ್ನಡಿಯಿದ್ದಂತೆ. ಸಾಹಿತ್ಯ ಬರೆಯುವ, ಓದುವವರ ಸಂಖ್ಯೆಯೂ ವಿರಳವಾಗುತ್ತಿದೆ ಎಂದು ವಿಷಾಧಿಸಿದರು.

ಕನ್ನಡ ವಿಶ್ವವಿದ್ಯಾನಿಲಯ ಹಂಪಿಯ ಶೈಕ್ಷಣಿಕ ನಿರ್ದೇಶಕರಾದ ಡಾ.ಎಸ್. ವೈ.ಸೋಮಶೇಖರ್ ಮಾತನಾಡಿ ಡಾ.ಜಿ.ಎನ್.ಮಲ್ಲಿಕಾರ್ಜುನಪ್ಪನವರದು ಸಮಾಜದ ಓರೆ ಕೋರೆಗಳನ್ನು ತಿದ್ದುವ ಬರವಣಿಗೆ. ಕೃತಿಯಲ್ಲಿ ಭಾವನೆ, ಅನುಭವವನ್ನು ಮುಕ್ತವಾಗಿ ಹಂಚಿಕೊಂಡಿದ್ದಾರೆ. ಸತ್ಯವನ್ನು ಸ್ಪಷ್ಟವಾಗಿ ಪದಗಳ ಮೂಲಕ ಹೇಳುವ ಪ್ರಯತ್ನ ಮಾಡಿದ್ದಾರೆ. ಸಂಸ್ಕೃತಿ ಕೂಡ ಗ್ರಂಥದಲ್ಲಿ ಹೊರಹೊಮ್ಮಿದೆ. ರೇಖಾಚಿತ್ರಕಾರ ಜಬೀವುಲ್ಲಾ ಎಂ.ಅಸದ್‌ರವರ ರೇಖಾ ಚಿತ್ರಗಳು ಪುಸ್ತಕದಲ್ಲಿ ಸೊಗಸಾಗಿ ಮೂಡಿ ಬಂದಿದೆ ಇಂದಿನ ವಿದ್ಯಮಾನಗಳನ್ನು ಪ್ರತಿಬಿಂಬಿಸುವ ಕೃತಿ ಎಂದರು.

ಮುಕ್ತ ವಿಚಾರ ವೇದಿಕೆ ಸಂಚಾಲಕ ಹಾಗೂ ವಿಶ್ರಾಂತ ಪ್ರಾಂಶುಪಾಲ ಪ್ರೊ.ಸಿ.ಬಸವರಾಜಪ್ಪ ಶ್ರೀಮತಿ ಸುಲೋಚನಾ ಡಾ.ಜಿ.ಎನ್.ಮಲ್ಲಿಕಾರ್ಜುನಪ್ಪನವರ ನುಡಿ ನಮನ ಕಾರ್ಯಕ್ರಮ ಉದ್ದೇಶಿಸಿ ಮಾತನಾಡಿದರು.

ಕೃತಿಕಾರ ಡಾ.ಜಿ.ಎನ್.ಮಲ್ಲಿಕಾರ್ಜುನಪ್ಪ, ಜಿಲ್ಲಾ ರೋಟರಿ ಗೌರ್ವನರ್ ರೊ.ಎಂ.ಕೆ.ರವೀಂದ್ರ, ರೇಖಾ ಚಿತ್ರಕಾರ ಜಬೀವುಲ್ಲಾ ಎಂ.ಅಸದ್ ವೇದಿಕೆಯಲ್ಲಿದ್ದರು.

ರಂಗ ನಿರ್ದೇಶಕ ಕೆ.ಪಿ.ಎಂ. ಗಣೇಶಯ್ಯ ಪ್ರಾರ್ಥಿಸಿದರು. ವಿಶ್ರಾಂತ ಪ್ರಾಂಶುಪಾಲರಾದ ಡಾ.ಸಿ.ಶಿವಲಿಂಗಪ್ಪ ಸ್ವಾಗತಿಸಿದರು.ಸಾಹಿತಿಹುರಳಿಬಸವರಾಜ್ ನಿರೂಪಿಸಿದರು. ಸಾಹಿತಿ ಡಾ.ಲೋಕೇಶ್ ಅಗಸನಕಟ್ಟೆ, ಜಿ.ಎಸ್.ಉಜ್ಜಿನಪ್ಪ, ಪ್ರೊ. ಹೆಚ್.ಲಿಂಗಪ್ಪ ಸೇರಿದಂತೆ ಡಾ.ಜಿ.ಎನ್. ಮಲ್ಲಿಕಾರ್ಜುನಪ್ಪನವರ ಅಪಾರ ಅಭಿಮಾನಿಗಳು ಹಾಗೂ ಕುಟುಂಬದವರು ಗ್ರಂಥ ಲೋಕಾರ್ಪಣೆಯಲ್ಲಿ ಪಾಲ್ಗೊಂಡಿದ್ದರು.

### ನಗರಸಭೆಯಿಂದ ಪ್ರಜಾಪ್ರಭುತ್ವ ದಿನಾಚರಣೆ ಮಾನವ ಸರಪಳಿ ಕಾರ್ಯಕ್ರಮಕ್ಕೆ ಜಾಗೃತಿ ಜಾಥ

# ಪ್ರಜಾಪ್ರಭುತ್ವ ಅಂದೋಲನಕ್ಕೆ ಎಲ್ಲರೂ ಕೈಜೋಡಿಸಿ




» ಚಳ್ಳಕೆರೆ

ಅಂತರಾಷ್ಟ್ರೀಯ ಪ್ರಜಾಪ್ರಭುತ್ವ ದಿನಾಚರಣೆ-2024 ಪ್ರಜಾಪ್ರಭುತ್ವಕ್ಕಾಗಿ ಮಾನವ ಸರಪಳಿ ಕಾರ್ಯಕ್ರಮ ಹಿನ್ನೆಲೆಯಲ್ಲಿ ನಗರಸಭೆ ಆಡಳಿತ ಶಾಲಾ ವಿದ್ಯಾರ್ಥಿಗಳು ಹಾಗೂ ನಗರಸಭೆ ಅಧಿಕಾರಿಗಳು, ಸಿಬ್ಬಂದಿ ವರ್ಗದೊಂದಿಗೆ ಜಾಗೃತಿ ಜಾಥ ನಡೆಸಿ ನೆಹರೂ ವೃತ್ತದಲ್ಲಿ ಮಾನವ ಸರಪಳಿ ನಿರ್ಮಿಸಿ ಸೆ. 15ರ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಮನವಿ ಮಾಡಲಾಯಿತು.

ಪೌರಾಯುಕ್ತ ಎಚ್.ಜಿ.ಜಗರೆಡ್ಡಿ ಮಾತನಾಡಿ, ರಾಜ್ಯ ಸರ್ಕಾರ ಇದೇ ಮೊದಲಬಾರಿಗೆ ಅಂತರಾಷ್ಟ್ರೀಯಪ್ರಜಾಪ್ರಭುತ್ವದಿನಾಚರಣೆಯನ್ನು ಮಾನವ ಸರಪಳಿ ನಿರ್ಮಿಸುವ ಮೂಲಕ ಆಚರಣೆ ಮಾಡುತ್ತಿದ್ದು, ಸಾರ್ವಜನಿಕರು ಸಹ ಮುಕ್ತವಾಗಿ ಈ ಕಾರ್ಯಕ್ರಮದಲ್ಲಿ ಭಾಗವಹಿಸಲು ಅವಕಾಶ ಮಾಡಿಕೊಡಲಾಗಿದೆ. ಪ್ರಜಾಪ್ರಭುತ್ವದಲ್ಲಿ ವಿಶ್ವಾಸವಿರುವ ಎಲ್ಲರೂ ಈ ಕಾರ್ಯಕ್ರಮದಲ್ಲಿ ಭಾಗವಹಿಸಬೇಕಿದೆ.

ನಮ್ಮ ದೇಶದ ಸಂಪೂರ್ಣ ಆಡಳಿತ ಪ್ರಜಾಪ್ರಭುತ್ವದ ಮೇಲಿದೆ. ನಾವೆಲ್ಲರೂ ಪ್ರಜಾಪ್ರಭುತ್ವವನ್ನು ಗೌರವಿಸುವ, ಉಳಿಸುವ ಕಾರ್ಯವನ್ನು ಮಾಡಬೇಕಿದೆ. ವಿಶ್ವದಲ್ಲೇ ನಮ್ಮ ರಾಷ್ಟ್ರದ ಪ್ರಜಾಪ್ರಭುತ್ವ ವಿಶೇಷ ಮನ್ನಣೆಯನ್ನು ಗಳಿಸಿದೆ. ನಮ್ಮನ್ನು ಆಳುವ ಸರ್ಕಾರವನ್ನು ನಾವೇ ಆರಿಸುವ ಅಧಿಕಾರಿವನ್ನು ನಮಗೆ ನೀಡಲಾಗಿದೆ ಎಂದರು.

ನಗರದ ಬಿಎಂ ಸರ್ಕಾರಿ ಪ್ರೌಢಶಾಲಾ ವಿದ್ಯಾರ್ಥಿಗಳ ಸಹಕಾರದೊಂದಿಗೆ ವಾಲ್ಮೀಕಿ ವೃತ್ತದಿಂದ ನೆಹರೂ ವೃತ್ತದವರೆಗೂ ಮೆರವಣಿಗೆ ನಡೆಸಿ ಮಾನವ ಸರಪಳಿ ನಿರ್ಮಿಸಿ ಸಾರ್ವಜನಿಕರಿಗೆ ಸೆ. 15ರ ಪ್ರಜಾಪ್ರಭುತ್ವಕ್ಕಾಗಿ ಮಾನವ ಸರಪಳಿ ದಿನಾಚರಣೆಯನ್ನು ಯಶಸ್ವಿಗೊಳಿಸಬೇಕೆಂದು ವಿನಂತಿಸಿದರು.

ನೈರ್ಮಲ್ಯ ಇಂಜಿನಿಯರ್ ಕೆ.ಬಿ.ನರೇಂದ್ರಬಾಬು, ಸಹಾಯಕ ಕಾರ್ಯಪಾಲಕ ಅಭಿಯಂತರ ಕೆ.ವಿನಯ್, ಸಹಾಯಕ ಇಂಜಿನಿಯರ್ ಕೆ.ಲೋಕೇಶ್, ವ್ಯವಸ್ಥಾಪಕ ಲಿಂಗರಾಜು, ಕಂದಾಯಾಧಿಕಾರಿ ಸತೀಶ್, ಸಮುದಾಯ ಅಧಿಕಾರಿ ಭೂತಣ್ಣ, ಪ್ರೋಗ್ರಾಂ ಅಧಿಕಾರಿ ಸಂದೀಪ್, ಹರೀಶ್, ಓಬಳೇಶ್, ಚೇತನ್, ನಾಗರಾಜು, ರಾಜೇಶ್, ಹಿರಿಯ ಆರೋಗ್ಯ ನಿರೀಕ್ಷಕರಾದ ಗಣೇಶ್, ಸುನೀಲ್, ಗೀತಾಕುಮಾರಿ, ರುದ್ರಮುನಿ, ಎಚ್. ತಿಪ್ಪೇಸ್ವಾಮಿ, ವಿಶ್ವನಾಥ, ಎಸ್.ಎಲ್.ಮಂಜಣ್ಣ, ಗುರುಪ್ರಸಾದ್, ವೆಂಕಟೇಶ್ ಮುಂತಾದವರು ಜಾಗೃತಿಜಾಥದಲ್ಲಿ ಭಾಗವಹಿಸಿದ್ದರು.

### ವಲಯಮಟ್ಟದ ಕ್ರೀಡಾಕೂಟ

# ಖೋ-ಖೋ: ದೊಡ್ಡ ಉಳ್ಳಾರ್ತಿ, ಕಾಲುವೇಹಳ್ಳಿ ಶಾಲೆಗಳಿಗೆ ಬಹುಮಾನ



» ಚಳ್ಳಕೆರೆ

ತಾಲ್ಲೂಕಿನ ತಳಕು ಹೋಬಳಿಯ ಘಟಪರ್ತಿ ವಲಯಮಟ್ಟದ ಹಿರಿಯಪ್ರಾಥಮಿಕ ಶಾಲೆಗಳ ಕ್ರೀಡಾಕೂಟದ ಬಾಲಕರ ವಿಭಾಗದ ಖೋ-ಖೋ ಪಂದ್ಯದಲ್ಲಿ ದೊಡ್ಡ ಉಳ್ಳಾರ್ತಿಯ ಸರ್ಕಾರಿ ಮಾದರಿ ಹಿರಿಯ ಪ್ರಾಥಮಿಕ ಶಾಲೆ ಪ್ರಥಮ ಸ್ಥಾನ, ಕಾಲುವೇಹಳ್ಳಿಯ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆ ದ್ವಿತೀಯ ಸ್ಥಾನ ಪಡೆದಿದೆ ಎಂದು ತಾಲ್ಲೂಕು ಶಿಕ್ಷಣ ಪರಿವೀಕ್ಷಕ ಯು.ಸುನೀಲ್‌ನಾಯ್ಕ ತಿಳಿಸಿದರು.

ಅವರು, ಬಿಎಂ ಸರ್ಕಾರಿ ಪ್ರೌಢಶಾಲಾ ಮೈದಾನದಲ್ಲಿ ನಡೆದ ವಿವಿಧ ಪಂದ್ಯಗಳನ್ನು ವೀಕ್ಷಿಸಿ, ವಿಜೇತ ತಂಡಗಳಿಗೆ ಪ್ರಶಸ್ತಿ ಪತ್ರ ವಿತರಿಸಿ ಮಾತನಾಡಿದರು. ಗ್ರಾಮೀಣ ಭಾಗದ ಸರ್ಕಾರಿ ಶಾಲೆಗಳಲ್ಲಿ ಕ್ರೀಡೆಗೆ ಇನ್ನೂ ಹೆಚ್ಚಿನ ಉತ್ತೇಜನದ ಅವಶ್ಯಕತೆ ಇದೆ. ಗ್ರಾಮೀಣ ಭಾಗದಲ್ಲಿ ಕ್ರೀಡೆಯನ್ನು ಬಲವಾಗಿ ಸಂಘಟಿಸುವ ಅವಶ್ಯಕತೆ ಇದೆ. ಈ ನಿಟ್ಟಿನಲ್ಲಿ ಇಲಾಖೆ ಮುಂದಿನ ದಿನಗಳಲ್ಲಿ ಕಾರ್ಯನಿರ್ವಹಿಸಲಿದೆ ಎಂದರು.

ಹಿರಿಯ ದೈಹಿಕ ಶಿಕ್ಷಕ ಪಾಪಣ್ಣ ಮಾತನಾಡಿ, ಈ ಬಾರಿ ನಡೆದ ಎಲ್ಲಾ ಪಂದ್ಯಗಳಲ್ಲೂ ಉತ್ತಮ ಕ್ರೀಡಾಸ್ಪೂರ್ತಿಯನ್ನು ನಾವು ವಿದ್ಯಾರ್ಥಿಗಳಿಂದ ಕಾಣಬಹುದಾಗಿದೆ. ಪ್ರತಿಯೊಂದು ಶಾಲೆಯಲ್ಲೂ ದೈಹಿಕ ಶಿಕ್ಷಕರು ವಿದ್ಯಾರ್ಥಿಗಳಿಗೆ ಕ್ರೀಡಾಸ್ಪೂರ್ತಿಯ ಬಗ್ಗೆ ಸಾಕಷ್ಟು ಮಾರ್ಗದರ್ಶನ ನೀಡಿದ್ದಾರೆ. ಪ್ರತಿಯೊಂದು ಪಂದ್ಯದಲ್ಲೂ ಎಲ್ಲರ ಗುರಿ ಗೆಲುವಿನತ್ತ ಮಾತ್ರ ಇತ್ತು. ಯಾವುದೇ ಸಣ್ಣಪುಟ್ಟ ಘಟನೆಗಳಿಗೆ ಅವಕಾಶ ನೀಡದಂತೆ ಶಾಂತಿಯುತವಾಗಿ ಕ್ರೀಡೆಗಳು ಮುಂದುವರೆದಿವೆ ಎಂದರು. ದೈಹಿಕ ಶಿಕ್ಷಕರಾದ ರಾಜಣ್ಣ, ಮಲ್ಲಿಕಾರ್ಜುನ, ಗುರುಮೂರ್ತಿ, ಸತೀಶ್, ಎಸ್.ಶ್ರೀರಾಮನಾಯಕ, ಅನಿಲ್, ಎಸ್‌ಡಿಎಂಸಿ ಅಧ್ಯಕ್ಷ ಪೆದ್ದಣ್ಣ ಮುಂತಾದವರು ಉಪಸ್ಥಿತರಿದ್ದರು.

# ವಿವಿಧ ಸ್ಥಳಗಳಲ್ಲಿ ಮಟ್ಕಾ ದಂಧೆ: ಹಣ ವಶ, ಇಬ್ಬರ ಮೇಲೆ ಪ್ರಕರಣ ದಾಖಲು

» ಚಳ್ಳಕೆರೆ

ಚಳ್ಳಕೆರೆ ನಗರದ ವೃತ್ತ ವ್ಯಾಪ್ತಿಯಲ್ಲಿ ಇಸ್ಪೀಟ್ ಜೂಜಾಟ ಹಾಗೂ ಮಟ್ಕಾ ಚೀಟಿ ದಂಧೆಯನ್ನು ನಿಯಂತ್ರಿಸಲು ಪೊಲೀಸರು ಸಾಕಷ್ಟು ಮುನ್ನೆಚ್ಚರಿಕೆ ಕ್ರಮ ಕೈಗೊಂಡರೂ ಪೊಲೀಸರ ಕಣ್ಣು ತಪ್ಪಿಸಿ ಮಟ್ಕಾ ಚೀಟಿ ಬರೆಯುತ್ತಿದ್ದ ಇಬ್ಬರನ್ನು ವಶಕ್ಕೆ ಪಡೆಯುವಲ್ಲಿ ಪೊಲೀಸರು ಯಶಸ್ವಿಯಾಗಿದ್ದಾರೆ.

ಪೇದೆ ಶಂಕರಣ್ಣನವರ ದೊರೆತ ಖಚಿತ ಮಾಹಿತಿ ಮೇರೆಗೆ ಹಿರಿಯ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಎಪಿಎಂಸಿ ಮಾರುಕಟ್ಟೆ ಆವರಣದಲ್ಲಿ ಸಾರ್ವಜನಿಕರನ್ನು ಮಟ್ಕಾ ಚೀಟಿ ಬರೆಸುವಂತೆ ಪ್ರೋತ್ಸಾಹಿಸುತ್ತಿದ್ದ ಕಾಟಪ್ಪನಹಟ್ಟಿಯ ಬಂಜಯ್ಯ(48), ಶಾಂತಿನಗರದ ನಾಗರಾಜ (55) ಗಾಂಧಿನಗರದ ಮಾರಮ್ಮಗುಡಿ ದೇವಸ್ಥಾನದ ಬಳಿ ಮಟ್ಕಾ ಚೀಟಿ ಬರೆಯುತ್ತಿದ್ದ ಇವರನ್ನು ವಶಕ್ಕೆ ಪಡೆದು ಅವರಿಂದ ಒಟ್ಟು 4890ರೂ ಹಣವನ್ನು ವಶಪಡಿಸಿ ಕೊಂಡು ಎಎಸ್‌ಐ ಶಿವಣ್ಣ ಪ್ರಕರಣ ದಾಖಲಿಸಿದ್ದಾರೆ.

## ಪ್ರಮುಖ ಸುದ್ದಿ

### ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಡಿ.ಎಂ.ಅಭಿನವ್ ಸಲಹೆ

# ಮಕ್ಕಳಲ್ಲಿ ಅಪೌಷ್ಠಿಕತೆ; ಸುಧಾರಿತ ಪೌಷ್ಠಿಕತೆಯಲ್ಲಿ ತೊಡಗಿಸಿ





» ಚಿತ್ರದುರ್ಗ

ಮಕ್ಕಳಲ್ಲಿ ಅಪೌಷ್ಟಿಕತೆ ಮತ್ತು ರಕ್ತಹೀನತೆ ಗುರುತಿಸಿ ಮಕ್ಕಳನ್ನು ಸುಧಾರಿತ ಪೌಷ್ಟಿಕತೆಯಲ್ಲಿ ತೊಡಗಿಸಬೇಕು ಎಂದು ಜಿಲ್ಲಾ ಆರ್‌ಸಿಹೆಚ್ ಅಧಿಕಾರಿ ಡಾ.ಡಿ.ಎಂ. ಅಭಿನವ್ ಸಲಹೆ ನೀಡಿದರು.

ನಗರದ ಜಿಲ್ಲಾ ಆರೋಗ್ಯಾಧಿಕಾರಿಗಳ ಸಭಾಂಗಣದಲ್ಲಿ ಶುಕ್ರವಾರ ಹಿರಿಯೂರು, ಹೊಸದುರ್ಗ ಮತ್ತು ಹೊಳಲ್ಕೆರೆ ತಾಲ್ಲೂಕಿನ ಪ್ರಾಥಮಿಕಆರೋಗ್ಯಸುರಕ್ಷತಾಧಿಕಾರಿಗಳಿಗೆ ಮಕ್ಕಳ ಸುಧಾರಿತ ಪೌಷ್ಟಿಕತೆಗಾಗಿ ಆರೋಗ್ಯ ಪ್ರಕ್ರಿಯೆ ಸಾಮಾರ್ಥ್ಯ ಅಭಿವೃದ್ಧಿ ತರಬೇತಿ ಕಾರ್ಯಾಗಾರಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

ಅಪೌಷ್ಠಿಕತೆಯ ಮಕ್ಕಳ ಪ್ರಮಾಣ ತಗ್ಗಿಸಲು ಈ ತರಬೇತಿ ಕಾರ್ಯಾಗಾರ ಒಂದು ನೂತನ ವಿಧಾನವಾಗಿದೆ. ಪ್ರತಿ ಗ್ರಾಮಗಳಲ್ಲಿ ಮಕ್ಕಳಲ್ಲಿ ಕಂಡು ಬರುವ ಅಪೌಷ್ಟಿಕತೆಯನ್ನು ಗುರಿತಿಸಿ ಆ ಮಕ್ಕಳಿಗೆ ಸ್ಥಳೀಯವಾಗಿ ದೊರೆಯುವ ಸುಧಾರಿತ ಪೌಷ್ಠಿಕಾಹಾರ ಸೇವನೆಗೆ ಅಂಗನವಾಡಿ ಕೇಂದ್ರಗಳಲ್ಲಿ ಮಕ್ಕಳ ತಾಯಂದಿರಿಗೆ ಸಲಹೆ ಮಾಹಿತಿ ಅರಿವು ಮೂಡಿಸಿ ಸುಧಾರಿತ ಪೌಷ್ಠಿಕ ಪೋಷಣೆಯಲ್ಲಿ ತೊಡುಗುವಂತೆ ಮಾಡುವುದು ತರಬೇತಿಯ ಮುಖ್ಯ ಉದ್ದೇಶ ಎಂದರು.

6 ವರ್ಷದೊಳಗಿನ ಮಕ್ಕಳಿಗೆ ಸಾಂಸ್ಥಿಕ ಹಾಗೂ ಸಮುದಾಯ ಮಟ್ಟದಲ್ಲಿ ಅಪೌಷ್ಠಿಕ ನಿವಾರಣೆಗಾಗಿ ಆರೈಕೆ ಮತ್ತು ಚಿಕಿತ್ಸೆ, ಪೌಷ್ಠಿಕ ಪುನ:ಶ್ಚೇತನ ಸಾರ್ವಜನಿಕ ಆರೋಗ್ಯ ಸೇವೆಗಳೊಂದಿಗೆ ಬಲಪಡಿಸಿ ಎಂದು ಹೇಳಿದರು. ತಾಲ್ಲೂಕು ಆರೋಗ್ಯಾಧಿಕಾರಿ ಡಾ.ಬಿ.ವಿ.ಗಿರೀಶ್ ಮಾತನಾಡಿ, ಗ್ರಾಮಮಟ್ಟದಲ್ಲಿ ಅಪೌಷ್ಠಿಕತೆಯ ಮಕ್ಕಳನ್ನು ಗುರುತಿಸಿ ಪಟ್ಟಿ ಮಾಡಿ ಜಿಲ್ಲಾ ಆಸ್ಪತ್ರೆಯಲ್ಲಿರುವ ಪೌಷ್ಠಿಕ ಪುನ:ಶ್ಚೇತನ ಕೇಂದ್ರಕ್ಕೆ ಕಳುಹಿಸಿ ಉಚಿತ ಆರೈಕೆ ಚಿಕಿತ್ಸೆ ಪೋಷಣೆ ಪಡೆದುಕೊಳ್ಳಲು ಅರಿವು ಮೂಡಿಸಿ ಎಂದರು.

ಕಾರ್ಯಾಗಾರದಲ್ಲಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಕೃಷ್ಣನಾಯ್ಕ್, ಕಾರ್ಯಾಗಾರದ ಸಂಪನ್ಮೂಲ ವ್ಯಕ್ತಿಗಳಾಗಿ ಉಪ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿ ಗೌರಮ್ಮ, ತಾಲ್ಲೂಕು ಆರೋಗ್ಯ ಶಿಕ್ಷಣಾಧಿಕಾರಿ ಎನ್.ಎಸ್.ಮಂಜುನಾಥ, ಕ್ಷೇತ್ರ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಬಿ.ಮೂಗಪ್ಪ, ಬಿ.ಜಾನಕಿ, ಲಲಿತಮ್ಮ, ಪೋಷಣ್ ಅಭಿಯಾನ ವ್ಯವಸ್ಥಾಪಕ ಕರಕಪ್ಪ ಮೇಟಿ ಹಾಗೂ ಪ್ರಾಥಮಿಕ ಆರೋಗ್ಯ ಸುರಕ್ಷತಾಧಿಕಾರಿಗಳು ಇದ್ದರು.

## ಫಾಸ್ಟ್ ನ್ಯೂಸ್

### ಮೀರಸಾಬಿಹಳ್ಳಿ: ಮನೆಯ ದಾರಿ ವಿಚಾರದಲ್ಲಿ ಜಗಳ; ಕೊಲೆಯಲ್ಲಿ ಅಂತ್ಯ

» ಚಳ್ಳಕೆರೆ

ತಾಲ್ಲೂಕಿನ ಮೀರಸಾಬಿಹಳ್ಳಿ ಗ್ರಾಮದಲ್ಲಿ ಬೀದಿನಲ್ಲಿ ನೀರು ಮತ್ತು ಓಡಾಡುವ ಜಾಗದ ವಿಚಾರದಲ್ಲಿ ತಿಪ್ಪೇಸ್ವಾಮಿ ಹಾಗೂ ಇತರೆ ಮೂವರಿಗೆ ಪರಸ್ಪರ ಗಲಾಟೆ ನಡೆದು ಕುಪಿತಗೊಂಡ ನೇತ್ರಾವತಿ, ಜ್ಞಾನೇಶ, ಶ್ರೀನಿವಾಸ್‌ಚಾರಿ, ನಾಗರಾಜಚಾರಿ ಇವರುಗಳು ತಿಪ್ಪೇಸ್ವಾಮಿಯವರ ಮೇಲೆ ಸ್ಟೀಲ್ ಬಕೇಟ್ ಮತ್ತು ಕೋಲ್‌ನಿಂದ ಹಲ್ಲೆ ನಡೆಸಿದ್ದು ಗಾಯಗೊಂಡಿದ್ದ ತಿಪ್ಪೇಸ್ವಾಮಿ ಚಳ್ಳಕೆರೆ ಆಸ್ಪತ್ರೆಗೆ ದಾಖಲಾಗಿ ಚಿಕಿತ್ಸೆ ಪಡೆದು ಹೆಚ್ಚಿನ ಚಿಕಿತ್ಸೆಗಾಗಿ ಜಿಲ್ಲಾ ಆಸ್ಪತ್ರೆಗೆ ದಾಖಲಿಸಿದ್ದು, ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿರುತ್ತಾನೆ. ಮೃತ ತಿಪ್ಪೇಸ್ವಾಮಿಯವರ ಸಂಬಂಧಿ ಪಿ.ಶಿವರುದ್ರಪ್ಪ ಈ ಬಗ್ಗೆ ಪೊಲೀಸರಿಗೆ ದೂರು ನೀಡಿ, ನಮ್ಮ ಚಿಕ್ಕಪ್ಪ ದಿವಂಗತ ತಿಪ್ಪೇಸ್ವಾಮಿಯವರಿಗೂ ಮತ್ತು ಮೇಲ್ಕಂಡ ಆರೋಪಿಗಳಿಗೆ ಮನೆಯ ದಾರಿ ಮತ್ತು ನಲ್ಲಿ ನೀರಿನ ವಿಚಾರಕ್ಕೆ ಹಾಗಾಗ ಗಲಾಟೆಯಾಗುತ್ತಿದ್ದು, ಸೆ. 10ರ ಮಂಗಳವಾರ ನಡೆದ ಗಲಾಟೆಯಲ್ಲಿ ತಿಪ್ಪೇಸ್ವಾಮಿಯವರ ಮೇಲೆ ಮಾರಣಾಂತಿಕ ಹಲ್ಲೆ ನಡೆಸಿದ್ದು ಚಿಕಿತ್ಸೆ ಫಲಕಾರಿಯಾಗದೆ ಮೃತಪಟ್ಟಿರುತ್ತಾರೆ. ಕೊಲೆ ಮಾಡಿದ ಆರೋಪಿಗಳ ವಿರುದ್ಧ ಕ್ರಮ ಕೈಗೊಳ್ಳಲು ದೂರು ನೀಡಿದ್ದು ಪಿಎಸ್‌ಐ ಜೆ.ಶಿವರಾಜ್ ಪ್ರಕರಣ ದಾಖಲಿಸಿ ತನಿಖೆ ಮುಂದುವರೆಸಿದ್ದಾರೆ.

### ರಂಗವ್ವನಹಳ್ಳಿ ಕೆರೆ ಬಳಿಯ ಸಾರ್ವಜನಿಕ ರಸ್ತೆಯಲ್ಲಿ ಜೂಜಾಟ: ಐವರ ವಶ

» ಚಳ್ಳಕೆರೆ

ಚಳ್ಳಕೆರೆ ವೃತ್ತ ವ್ಯಾಪ್ತಿಯ ರಂಗವ್ವನಹಳ್ಳಿ ಕೆರೆಯ ಸಾರ್ವಜನಿಕ ರಸ್ತೆಯ ಬಳಿ ಕಾನೂನು ಬಾಹಿರವಾಗಿ ಜೂಜಾಟದಲ್ಲಿ ತೊಡಗಿದ್ದ ಅದೇ ಗ್ರಾಮದ ಓಬಯ್ಯ(34) ಇತರೆ ನಾಲ್ವರನ್ನು ವಶಕ್ಕೆ ಪಡೆದ ಪೊಲೀಸರು ಅವರಿಂದ ಜೂಜಾಟದ ಹಣ 4400ರನ್ನು ವಶಪಡಿಸಿಕೊಂಡಿರುತ್ತಾರೆ. ಪೇದೆ ಕೆ.ಶಂಕರಣ್ಣ ತಮಗೆ ದೊರೆತ ಖಚಿತ ವರ್ತಮಾನದ ಮೇರೆಗೆ ದಾಳಿ ನಡೆಸಿ ಜೂಜುಕೋರರನ್ನು ವಶಕ್ಕೆ ಪಡೆದುಕೊಂಡಿದ್ದು, ಎಎಸ್‌ಐ ಶಿವಣ್ಣ ಪ್ರಕಾರಣ ದಾಖಲಿಸಿದ್ದಾರೆ. ಇಂದು ಚಳ್ಳಕೆರೆ ನಗರ ಸೇರಿ ವಿವಿಧ ಗ್ರಾಮ ಪಂಚಾಯಿತಿ ವ್ಯಾಪ್ತಿಯಲ್ಲಿ ವಿದ್ಯುತ್ ಸರಬರಾಜು ಬಂದ್. ಚಳ್ಳಕೆರೆ-13 ನಗರದ ಬೆಂಗಳೂರು ವಿದ್ಯುತ್ ಕಂಪನಿ ಉಪವಿಭಾಗ ವ್ಯಾಪ್ತಿಯಲ್ಲಿ 66/11 ಕೆ.ವಿ. ವಿದ್ಯುತ್ ವಿತರಣಾ ಕೇಂದ್ರದ ತ್ರೈಮಾಸಿಕ ನಿರ್ವಹಣೆ ಕಾಮಗಾರಿ ಪ್ರಯುಕ್ತ ಸೆ.14ರ ಶನಿವಾರ ಬೆಳಗ್ಗೆ 10ರಿಂದ ಸಂಜೆ5ರ ತನಕ ಚಳ್ಳಕೆರೆ ನಗರ ಪ್ರದೇಶಗಳಾದ ಬೆಂಗಳೂರು, ಬಳ್ಳಾರಿ ರಸ್ತೆ, ಬುಡ್ನಹಟ್ಟಿ, ನಗರಂಗೆರೆ, ನನ್ನಿವಾಳ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯ ಗ್ರಾಮಗಳಲ್ಲಿ ವಿದ್ಯುತ್ ಸರಬರಾಜನ್ನು ಸ್ಥಗಿತಗೊಳಿಸಲಾಗುವುದು ಎಂದು ಎಇಇ ಜೆ.ಶಿವಪ್ರಸಾದ್ ತಿಳಿಸಿದ್ದಾರೆ. ಗ್ರಾಹಕರಿಗೆ ಆಗುವ ತೊಂದರೆಗೆ ವಿಷಾದ ವ್ಯಕ್ತಪಡಿಸಿರುವ ಅವರು ತ್ರೈಮಾಸಿಕ ನಿರ್ವಹಣಾ ಕಾಮಗಾರಿ ಸೇರಿದಂತೆ ಇಲಾಖೆಯ ಕೆಲಸ ಕಾರ್ಯಗಳಿಗೆ ಸಾರ್ವಜನಿಕರು ಸಹಕಾರ ನೀಡುವಂತೆ ಮನವಿ ಮಾಡಿದ್ಧಾರೆ.

### ಚಿತ್ರದುರ್ಗಕ್ಕೆ ಮಹಿಳಾ ಆಯೋಗದ ಅಧ್ಯಕ್ಷರ ಭೇಟಿ ಸೆ.14 ರಂದು

» ಚಿತ್ರದುರ್ಗ

ಕರ್ನಾಟಕ ರಾಜ್ಯ ಮಹಿಳಾ ಆಯೋಗ ಅಧ್ಯಕ್ಷೆ ಡಾ.ನಾಗಲಕ್ಷ್ಮೀ ಚೌಧರಿಯವರು ಸೆ.14ರಂದು ಚಿತ್ರದುರ್ಗ ನಗರಕ್ಕೆ ಭೇಟಿ ನೀಡಲಿದ್ದಾರೆ. ಸೆ.14 ರ ಶನಿವಾರದಂದು ಬೆಳಿಗ್ಗೆ ಬೆಂಗಳೂರಿನಿಂದ ಹೊರಟು, ಬೆಳಿಗ್ಗೆ 10 ಗಂಟೆಗೆ ಚಿತ್ರದುರ್ಗ ನಗರದ ಜಿಲ್ಲಾ ಭಾಲಭವನದಲ್ಲಿ ಹಮ್ಮಿಕೊಂಡಿರುವ "ಕಾಡುಗೊಲ್ಲರಲ್ಲಿ ಹುಟ್ಟುಮುಟ್ಟು-ಅರಿವಿನ ಪಯಣ" ಕಾರ್ಯಕ್ರಮ ಉದ್ಘಾಟಿಸುವರು. ತದನಂತರ ಮಧ್ಯಾಹ್ನ 2.30ಕ್ಕೆ ಜಿಲ್ಲಾ ಆಸ್ಪತ್ರೆ ಹಾಗೂ 3.30ಕ್ಕೆ ಚಿತ್ರದುರ್ಗ ನಗರದ ಮಹಿಳಾ ಪೊಲೀಸ್ ಠಾಣೆಗೆ ಭೇಟಿ ನೀಡಲಿದ್ದಾರೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್ ತಿಳಿಸಿದ್ದಾರೆ.

### ವಿಜ್ಞಾನಗಳ ವಿ.ವಿ ಸಂಸ್ಥಾಪನಾ ದಿನಾಚರಣೆ

» ಶಿವಮೊಗ್ಗ

ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯ ಶಿವಮೊಗ್ಗ ಇವರ ವತಿಯಿಂದ ಸೆ. 21 ರಂದು ಬೆಳಗ್ಗೆ 11 ಗಂಟೆಗೆ ಇರುವಕ್ಕಿ, ಆನಂದಪುರ, ಸಾಗರ ಇಲ್ಲಿ ವಿಶ್ವವಿದ್ಯಾಲಯದ 12ನೇ ಸಂಸ್ಥಾಪನಾ ದಿನಾಚರಣೆ ಆಯೋಜಿಸಲಾಗಿದೆ. ಕಾರ್ಯಕ್ರಮದ ಉದ್ಘಾಟನೆಯನ್ನು ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ ಹಾಗೂ ಶಿವಮೊಗ್ಗ ಜಿಲ್ಲಾ ಉಸ್ತುವಾರಿ ಸಚಿವರಾದ ಮಧು ಬಂಗಾರಪ್ಪ ನೆರವೇರಿಸುವರು. ಮುಖ್ಯ ಅಥಿತಿಯಾಗಿ ಸಾಗರ ಕ್ಷೇತ್ರದ ಶಾಸಕರಾದ ಗೋಪಾಲಕೃಷ್ಣ ಬೇಳೂರು ಪಾಲ್ಗೊಳ್ಳುವರು. ಅಧ್ಯಕ್ಷತೆಯನ್ನು ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಜ್ಞಾನಗಳ ವಿವಿ ಕುಲಪತಿಗಳಾದ ಡಾ. ಆರ್, ಸಿ ಜಗದೀಶ ವಹಿಸುವರು.

## ಹಿರಿಯ ನಾಗರಿಕರ ಕ್ರೀಡಾ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳ ಕಾರ್ಯಕ್ರಮ

# ಹಿರಿಯರ ಬಗ್ಗೆ ಅಸಡ್ಡೆ ಸಲ್ಲದು: ರಂಗಪ್ಪ ರೆಡ್ಡಿ





» ಚಿತ್ರದುರ್ಗ

ಹಿರಿಯ ನಾಗರಿಕರ ಬಗ್ಗೆ ಅಸಡ್ಡೆ, ಅಸಹ್ಯ ಮನೋಭಾವ ಸಲ್ಲದು ಎಂದು ಎಂದು ಹಿರಿಯ ನಾಗರಿಕರ ಸಂಘದ ಜಿಲ್ಲಾ ಘಟಕದ ಅಧ್ಯಕ್ಷ ರಂಗಪ್ಪ ರೆಡ್ಡಿ ಹೇಳಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ರಾಜ್ಯ ಸರ್ಕಾರಿ ನಿವೃತ್ತ ನೌಕರರ ಸಂಘ, ರೋಟರಿ ಕ್ಲಬ್ ಹಾಗೂ ಹಿರಿಯ ನಾಗರಿಕರ ಸ್ವಯಂ ಸೇವಾ ಸಂಸ್ಥೆಗಳ ವತಿಯಿಂದ ಶುಕ್ರವಾರ ನಗರದ ಒನಕೆ ಓಬವ್ವ ಕ್ರೀಡಾಂಗಣದಲ್ಲಿ ಆಯೋಜಿಸಲಾದ ಹಿರಿಯ ನಾಗರಿಕರ ಕ್ರೀಡಾ ಮತ್ತು ಸಾಂಸ್ಕೃತಿಕ ಸ್ಪರ್ಧೆಗಳ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಅಕ್ಟೋಬರ್ 1 ರಂದು ಇಡೀ ವಿಶ್ವದಾದ್ಯಂತ ವಿಶ್ವ ನಾಗರಿಕರ ದಿನಾಚರಣೆಯನ್ನು ಆಚರಿಸಲಾಗುತ್ತದೆ. ಇದರ ಅಂಗವಾಗಿ ಕ್ರೀಡೆ ಹಾಗೂ ಸಾಂಸ್ಕೃತಿಕ ಸ್ಪರ್ಧೆಗಳನ್ನು ಆಯೋಜಿಸಲಾಗಿದೆ.





ಹಿರಿಯ ನಾಗರಿಕರೆಲ್ಲರೂ ಕ್ರೀಡಾಕೂಟದಲ್ಲಿ ಭಾಗವಹಿಸಿ ಪ್ರಶಸ್ತಿಗಳನ್ನು ಪಡೆಯಬೇಕೆಂದೇನು ಇಲ್ಲ. ದೈಹಿಕವಾಗಿ ಚಟುವಟಿಕೆಯಿಂದರಲು ಸಹಕಾರಿಯಾಗಿದೆ. ಸಮಾಜದಲ್ಲಿ ಹಿರಿಯ ನಾಗರಿಕರನ್ನು ಗೌರವದಿಂದ ಕಾಣಬೇಕು ಎಂದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಉಪನಿರ್ದೇಶಕಿ ಭಾರತಿ ಆರ್ ಬಣಕಾರ್ ಮಾತನಾಡಿ, ಪ್ರಸ್ತುತ ದಿನಗಳಲ್ಲಿ 60 ವರ್ಷ ಮೇಲ್ಪಟ್ಟ ಹಿರಿಯ ನಾಗರಿಕರಿಗೆ ಕ್ರೀಡೆ ಹಾಗೂ ಸಾಂಕೃತಿಕ ಕ್ಷೇತ್ರದಲ್ಲಿ ಅವಕಾಶಗಳು ಸಿಗುವುದು ಕಡಿಮೆ. ಆದ್ದರಿಂದ ಪ್ರತಿ ವರ್ಷದಂತೆ ಈ ಬಾರಿಯೂ ವಿಶ್ವ ನಾಗರೀಕರ ದಿನಾಚರಣೆಯ ಅಂಗವಾಗಿ ಹಿರಿಯ ನಾಗರೀಕರಿಗೆ ಕ್ರೀಡಾಕೂಟ ಹಾಗೂ ಸಾಂಕೃತಿಕ ಕಾರ್ಯಕ್ರಮ ಆಯೋಜಿಸಲಾಗಿದೆ. ಕ್ರೀಡೆ, ಸಾಂಸ್ಕೃತಿಕ ಕಾರ್ಯಕ್ರಮಗಳಲ್ಲಿ ಭಾಗವಹಿಸುವುದರಿಂದ ಮನಸ್ಸಿಗೆ ಉಲ್ಲಾಸ, ಉತ್ಸಾಹ ನೆಮ್ಮದಿಯನ್ನು ನೀಡುವುದರ ಜೊತೆಗೆ, ಹಿರಿಯ ನಾಗರಿಕರ ಸಾಮರ್ಥ್ಯಕ್ಕೆ ಈ ವೇದಿಕೆ ಸಾಕ್ಷಿಯಾಗಲಿದೆ ಎಂದರು.

ಹಿರಿಯ ನಾಗರಿಕರಿಗೆ ಮ್ಯೂಜಿಕಲ್ ಚೇರ್, ಬಿರುಸಿನ ನಡಿಗೆ, ಬಕೆಟ್‌ನಲ್ಲಿ ರಿಂಗ್ ಎಸೆಯುವ ಸ್ಪರ್ಧೆ, ಗಾಯನ ಮತ್ತು ಏಕ ಪಾತ್ರಾಭಿನಯ ಸ್ಪರ್ಧೆಗಳನ್ನು ನಡೆಸಲಾಯಿತು.

ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಡಿ.ಸಿ.ಸೋಮಶೇಖರಯ್ಯ ಸ್ವಾಗತಿಸಿದರು. ಜಿಲ್ಲಾ ವಿಕಲಚೇತನರ ಪುನರ್ವಸತಿ ಕೇಂದ್ರ ನೋಡಲ್ ಅಧಿಕಾರಿ ಜಿ.ಹರಿಪ್ರಸಾದ್ ವಂದಿಸಿದರು. ಬಾಲಭವನ ನಿರ್ವಾಹಕ ಕುಮಾರ್ ಕಾರ್ಯಕ್ರಮ ನಿರೂಪಿಸಿದರು.

ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಜಿಲ್ಲಾ ನಿರೂಪಣಾಧಿಕಾರಿ ಎಸ್.ವಿಜಯ್ ಕುಮಾರ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಅಧಿಕಾರಿ ಪವಿತ್ರ, ಶಿಶು ಅಭಿವೃದ್ಧಿ ಯೋಜನಾಧಿಕಾರಿ ಎಂ.ವಿ.ವೀಣಾ, ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ಸವಿತಾ, ಪರಿವೀಕ್ಷಣಾಧಿಕಾರಿ ಸುರೇಶ್ ಸೇರುದಂತೆ ಸಿಬ್ಬಂದಿ ಉಪಸ್ಥಿತರಿದ್ದರು.

## ಈ ಗೆಲುವು ಗ್ರಾಮೀಣ ಭಾಗದ ಕ್ರೀಡಾಪಟುಗಳಿಗೆ ಸ್ಫೂರ್ತಿಯಾಗಲಿ: ಕೆ.ಚಂದ್ರಪ್ಪ

# ಖೋ-ಖೋ: ರಾಜ್ಯಮಟ್ಟಕ್ಕೆ ಆಯ್ಕೆ: ಸನ್ಮಾನ

» ಚಳ್ಳಕೆರೆ



ತಾಲ್ಲೂಕಿನ ತಳಕು ಹೋಬಳಿಯ ಘಟಪರ್ತಿ ಗ್ರಾಮದ ಶ್ರೀಗೌರಿದೇವಿ ವಿದ್ಯಾಸಂಸ್ಥೆಯ ಗೌರಿದೇವಿ ಸ್ವತಂತ್ರ ಪದವಿಪೂರ್ವ ಕಾಲೇಜಿನ ವಿದ್ಯಾರ್ಥಿನಿಯರು ಚಿತ್ರದುರ್ಗದ ಒನಕೆ ಓಬವ್ವ ಕ್ರೀಡಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟ ಖೋ-ಖೋದಲ್ಲಿ ಗೆಲುವು ಸಾಧಿಸಿ ರಾಜ್ಯಮಟ್ಟಕ್ಕೆ ಆಯ್ಕೆಯಾದ ಹಿನ್ನೆಲೆಯಲ್ಲಿ ಸಂಸ್ಥೆಯ ಕಾರ್ಯದರ್ಶಿ, ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ಕೆ.ಚಂದ್ರಪ್ಪ, ಕಾಲೇಜಿನ ಖೋ-ಖೋ ಆಟಗಾರರು ಹಾಗೂ ಸಿಬ್ಬಂದಿ ವರ್ಗವನ್ನು ಅಭಿನಂದಿಸಿದರು.

ಶಾಲೆಯ ಆವರಣದಲ್ಲಿ ನಡೆದ ಅಭಿನಂದನಾ ಸಮಾರಂಭದಲ್ಲಿ ಭಾಗವಹಿಸಿ ಮಾತನಾಡಿದ ಅವರು, ಹೋಬಳಿ ಮಟ್ಟದ ನಮ್ಮ ಪದವಿಪೂರ್ವ ಕಾಲೇಜು ವಿದ್ಯಾರ್ಥಿಗಳು ಜಿಲ್ಲಾ ಮಟ್ಟದಲ್ಲಿ ಸಾಕಷ್ಟು ಸ್ಪರ್ಧೆ ನೀಡಿ ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದಾರೆ. ಇದು ಗ್ರಾಮೀಣ ಭಾಗದ ಎಲ್ಲಾ ಆಟಗಾರರಿಗೆ ಸ್ಫೂರ್ತಿ ನೀಡುವ ವಿಷಯವಾಗಿದೆ. ಕಾಲೇಜಿನ ದೈಹಿಕ ಶಿಕ್ಷಕರಾದ ಕೆ.ಟಿ.ವೇಲೂರು ಹಾಗೂ ಶಿಕ್ಷಕರನ್ನು ಅಭಿನಂದಿಸುವುದಾಗಿ ತಿಳಿಸಿದರು.

ಇದೇ ಸಂದರ್ಭದಲ್ಲಿ ಕಾಲೇಜಿನ ಕೆ.ಸುಶ್ಮಿತ 800 ಮೀಟರ್ ಓಟದಲ್ಲಿ ದ್ವಿತೀಯ, ಮೂರುಸಾವಿರ ಮೀಟರ್ ನಡಿಗೆಯಲ್ಲಿ ದ್ವಿತೀಯ ಸ್ಥಾನ ಪಡೆದು ರಾಜ್ಯಮಟ್ಟಕ್ಕೆ ಆಯ್ಕೆಯಾಗಿದ್ದು ಅವರನ್ನು ಅಭಿನಂದಿಸಲಾಯಿತು.

ತಂಡದ ನಾಯಕಿ ವೈಷ್ಣವಿ, ಆಟಗಾರರಾದ ಓ.ಮೌನಿಕಾ, ಕೆ.ಸುಶ್ಮಿತಾ, ಸಿ.ಎಂ.ಪಲ್ಲವಿ, ಆರ್.ಸುಶ್ಮಿತಾ, ಎಂ.ಸಿಂಧು, ಮಹಾಂತಮ್ಮ, ಆರ್.ಭಾರತಿ, ಪವಿತ್ರ, ಪ್ರಿಯಾ, ಡಿ.ಮೌನಿಕ ಅಭಿನಂದಿಸಲಾಯಿತು. ಪ್ರಾಂಶುಪಾಲ ಓ.ತಿಪ್ಪೇಸ್ವಾಮಿ, ಉಪನ್ಯಾಸಕ ಎಸ್. ಅಕ್ಷಯರೆಡ್ಡಿ, ಎಚ್.ಪ್ರಭಾಕರ, ಟಿ.ಗಂಗಾಧರ, ದೇವರಾಜು, ಗುರುಸ್ವಾಮಿ, ಪಿ.ಶ್ರೀನಿವಾಸ್, ನಾಗೇಶ್ ಮುಂತಾದವರು ಅಭಿನಂದನಾ ಸಮಾರಂಭದಲ್ಲಿ ಭಾಗವಹಿಸಿದ್ದರು.

## ಪರಿಸರ ಜಾಗೃತಿಗಾಗಿ ಕಡಪದಿಂದ ಗೋವಾಕ್ಕೆ ಸೈಕಲ್ ಜಾಥ



ಚಳ್ಳಕೆರೆ: ನೈಸರ್ಗಿಕ ಆಪತ್ತು ಎದುರಿಸಬೇಕಾದರೆ ನಾವು ಆ ಸಂಪತ್ತನ್ನು ಸಂರಕ್ಷಿಸುವ ಕಾರ್ಯದಲ್ಲಿ ಮುಂದಾಗಬೇಕಿದೆ. ಪ್ರಕೃತಿಗೆ ವಿರುದ್ಧವಾಗಿ ನಡೆದುಕೊಂಡರೆ ದುರಂತಗಳು ನಮ್ಮ ಬದುಕನ್ನೇ ಅಸ್ಥಿರಗೊಳಿಸುತ್ತವೆ. ಈ ನಿಟ್ಟಿನಲ್ಲಿ ಪರಿಸರ ಜಾಗೃತಿ ಹಾಗೂ ನೈಸರ್ಗಿಕ ಸಂಪತ್ತು ಉಳಿಸುವ ನಿಟ್ಟಿನಲ್ಲಿ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸಲು ಆಂಧ್ರಪ್ರದೇಶದ ಕಡಪ ಜಿಲ್ಲೆಯ ಬಳ್ಳೇರಪಲ್ಲಿ ಯುವಕ ಶಿವಶಂಕರ ಸೈಕಲ್ ಜಾಗೃತಿ ಜಾಥದ ಮೂಲಕ ಸಾರ್ವಜನಿಕರಲ್ಲಿ ಜಾಗೃತಿ ಮೂಡಿಸುವ ಕಾರ್ಯಕ್ಕೆ ಮುಂದಾಗಿದ್ದಾನೆ. ಆಂದ್ರ ಪ್ರದೇಶ ಕಡಪದಿಂದ ಗೋವಾ ರಾಜ್ಯ ಸೈಕಲ್ ಯಾತ್ರೆ ಕೈಗೊಂಡಿದ್ದು ಪರಶುರಾಮಪುರ ಮೂಲಕ ಚಳ್ಳಕೆರೆಗೆ ಆಗಮಿಸಿದ ಇವರನ್ನು ನೇತಾಜಿ ಸ್ನೇಹ ಬಳಗ ಮತ್ತು ಯುವಕರ ಪಡೆ ಸ್ವಾಗತಿಸಿ, ಅಭಿನಂದಿಸಿತು. ನೇತಾಜಿಬಳಗದ ಅಧ್ಯಕ್ಷ, ನಗರಸಭೆ ನಾಮನಿರ್ದೇಶನ ಸದಸ್ಯ ನೇತಾಜಿಪ್ರಸನ್ನಮಾತನಾಡಿ, ಶಿವಶಂಕರ್ ಉತ್ತಮ ಕಾರ್ಯವನ್ನು ಮಾಡುವ ಮೂಲಕ ಯುವಕರಿಗೆ ಮಾದರಿಯಾಗಿದ್ದಾರೆ. ಸುಮಾರು 650 ಕಿ.ಮೀ ದೂರವನ್ನು ಬಿಸಲು, ಮಳೆ ಲೆಕ್ಕಿಸದೆ ಸೈಕಲ್ ಮೂಲಕ ಜಾಥ ನಡೆಸುವ ಅವರ ಕಾರ್ಯಕ್ಕೆ ಮೆಚ್ಚುಗೆ ವ್ಯಕ್ತಪಡಿಸಬೇಕು. ಯುವ ಜನಾಂಗ ಪರಿಸರದ ಸಂರಕ್ಷಣೆಗೆ ಮುಂದಾಗಬೇಕು ಎಂದರು. ವಿಶ್ವಕರ್ಮ ಪರಿಷತ್‌ನ ರಾಜ್ಯಾಧ್ಯಕ್ಷ ಆರ್.ಪ್ರಸನ್ನಕುಮಾರ್, ಬಿ.ಫರೀದ್‌ಖಾನ್, ದುಗ್ಗಾವರತಿಮ್ಮಣ್ಣ, ನಾಗೇಂದ್ರ, ರವಿ, ನಗರಂಗೆರೆಬಾಬು, ರಂಗಸ್ವಾಮಿ, ಚೇತನ್‌ಕುಮಾರ್ ಮುಂತಾದವರು ಉಪಸ್ಥಿತರಿದ್ದರು.

## ಪ್ರಮುಖ ಸುದ್ದಿ

## ಪತ್ರಿಕಾ ದಿನಾಚರಣೆಯಲ್ಲಿ ಮಾಧ್ಯಮ ಕ್ಷೇತ್ರದಲ್ಲಿ ಸಾಧನೆಗೈದ ಹಲವರಿಗೆ ಪ್ರಶಸ್ತಿ ಪ್ರದಾನ

# ಮಾಧ್ಯಮಗಳು ವಾಸ್ತವ ಸಂಗತಿ ಜನರಿಗೆ ಮುಟ್ಟಿಸುವ ಕೆಲಸ ಮಾಡಲಿ

» ದಾವಣಗೆರೆ

ಮಾಧ್ಯಮಗಳು ವಾಸ್ತವ ಸುದ್ದಿಗಳನ್ನು ಪ್ರಾಮಾಣಿಕವಾಗಿ ಜನರಿಗೆ ತಲುಪಿಸುವ ಕೆಲಸ ಮಾಡಬೇಕಾಗಿದೆ ಎಂದು ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಎಸ್.ಎಸ್.ಮಲ್ಲಿಕಾರ್ಜುನ್ ತಿಳಿಸಿದರು.

ಅವರು ಶುಕ್ರವಾರ ಕುವೆಂಪು ಕನ್ನಡ ಭವನದಲ್ಲಿ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕಾರ್ಯನಿರತ ಪತ್ರಕರ್ತರ ಸಂಘ, ದಾವಣಗೆರೆ ಇವರ ಸಂಯುಕ್ತಾಶ್ರಯದಲ್ಲಿ ಏರ್ಪಡಿಸಲಾದ ಪತ್ರಿಕಾ ದಿನಾಚರಣೆ, ಪತ್ರಕರ್ತರ ಮಕ್ಕಳಿಗೆ ಪ್ರತಿಭಾ ಪುರಸ್ಕಾರ ಹಾಗೂ ಮಾಧ್ಯಮ ಕ್ಷೇತ್ರದಲ್ಲಿ ಗಣನೀಯ ಸೇವೆ ಮಾಡಿದ ಪತ್ರಕರ್ತರಿಗೆ ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿದರು.

ದಾವಣಗೆರೆಯಲ್ಲಿ ಸಾಹಿತ್ಯ ಸಮ್ಮೇಳನ, ಪತ್ರಕರ್ತರ ರಾಜ್ಯ ಮಟ್ಟದ ಸಮ್ಮೇಳನ ಸೇರಿದಂತೆ ಅನೇಕ ಕಾರ್ಯಕ್ರಮಗಳನ್ನು ಬಹಳ ಯಶಸ್ವಿಯಾಗಿ ನಡೆಸಿಕೊಡಲಾಗಿದೆ. ಈ ಸಂದರ್ಭದಲ್ಲಿ ಪತ್ರಕರ್ತರ ಮಕ್ಕಳಿಗೆ ಹಾಗೂ ಸಾಧನೆ ಮಾಡಿದವರಿಗೆ ಪ್ರಶಸ್ತಿ ನೀಡುತ್ತಿರುವುದು, ಅವರೆಲ್ಲರ ಜವಾಬ್ದಾರಿ ಹೆಚ್ಚಿಸಿ ಪ್ರೋತ್ಸಾಹಿಸಿದಂತಾಗಿದೆ. ಮಾಧ್ಯಮ ಕ್ಷೇತ್ರದಲ್ಲಿ ಅವಿಭಜಿತ ಜಿಲ್ಲೆಯಾದಾಗ ಕೇಶವಮೂರ್ತಿ, ಷಡಾಕ್ಷರಪ್ಪ, ಪಂಪಾಪತಿ ಸೇರಿದಂತೆ ಅನೇಕರು ಈ ಕ್ಷೇತ್ರದಲ್ಲಿ ತಮ್ಮ ಪ್ರಾಮಾಣಿಕವಾದ ಸೇವೆ ಮಾಡಿದ್ದಾರೆ. ಅಂದಿನ ದಿನಗಳಲ್ಲಿ ಪತ್ರಿಕೆ ಮುದ್ರಣ ಮಾಡಲು ಮೊಳೆಅಚ್ಚು ಜೋಡಿಸಬೇಕಿತ್ತು. ಇಂದು ಕಂಪ್ಯೂಟರ್ ಕಾಲವಾಗಿದ್ದು ಕೆಲಸ ಮಾಡಲು ತಾಂತ್ರಿಕತೆ ಸುಲಭವಾಗಿಸಿದೆ ಎಂದರು.

ದಾವಣಗೆರೆ ಜಿಲ್ಲಾ ಕೇಂದ್ರದಲ್ಲಿ ಪತ್ರಿಕಾಭವನದ ಕೊರತೆಯಿದ್ದು ಮಂಜೂರಾತಿ ನೀಡಿರುವ ನಿವೇಶನಕ್ಕೆ ಸರ್ಕಾರದ ಮಟ್ಟದಲ್ಲಿ ರಿಯಾಯಿತಿ



ನೀಡಲು ಅನುಮತಿ ಕೊಡಿಸಲಾಗುತ್ತದೆ. ಮತ್ತು ಸುಸಜ್ಜಿತವಾದ ಭವನ ನಿರ್ಮಾಣ ಮಾಡಲು ಹಾಗೂ ಪತ್ರಕರ್ತರ ಮಕ್ಕಳಿಗೆ ನೆರವಾಗಲು ಜನಕಲ್ಯಾಣ ಟ್ರಸ್ಟ್ ಮೂಲಕವೂ ನೆರವು ನೀಡಲಾಗುತ್ತದೆ ಎಂದರು.

ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರಾದ ಕೆ.ವಿ.ಪ್ರಭಾಕರ್ ರವರು ಪ್ರಶಸ್ತಿ ಪ್ರದಾನ ಮಾಡಿ ಮಾತನಾಡಿ ಮಾಧ್ಯಮಗಳು ಸರ್ಕಾರ ಮತ್ತು ಸಮಾಜಕ್ಕೆ ಸೇತುವೆಯಾಗಿ ಕೆಲಸ ಮಾಡಬೇಕು, ಈ ನಿಟ್ಟಿನಲ್ಲಿ ಅಭಿವೃದ್ಧಿ ಪತ್ರಿಕೋದ್ಯಮಕ್ಕೆ ಹೆಚ್ಚು ಒತ್ತು ನೀಡುವ ಅಗತ್ಯವಿದೆ. ಜನರಿಗೆ ಬೇಕಾಗಿರುವುದೇನು, ಅದನ್ನರಿತು ಹೆಚ್ಚಿನ ಒತ್ತನ್ನು ಮಾಧ್ಯಮಗಳು ನೀಡುವ ಕೆಲಸ ಮಾಡಬೇಕಾಗಿದೆ. ಇತ್ತೀಚಿನ ದಿನಗಳಲ್ಲಿ ಊಹಾ ಪತ್ರಿಕೋದ್ಯಮ ಬೆಳೆಯುತ್ತಿದ್ದು ಜನರ ವಿಶ್ವಾಸಗಳಿಸಲು ಖಚಿತತೆಯ ಸುದ್ದಿಗೆ ಒತ್ತು ನೀಡಬೇಕೆಂದರು.

ಕಳೆದ ಹಲವಾರು ವರ್ಷಗಳಿಂದ ಗ್ರಾಮೀಣ ಪತ್ರಕರ್ತರಿಗೆ ಬಸ್‌ಪಾಸ್ ನೀಡಬೇಕೆಂಬ ಬೇಡಿಕೆ ಈಡೇರಿರುವುದಿಲ್ಲ. ಈಗಾಗಲೇ ಸರ್ಕಾರದ ಹಂತದಲ್ಲಿ ಎಲ್ಲಾ ಪ್ರಕ್ರಿಯೆಗಳು ಮುಗಿದಿದ್ದು ಮುಂದಿನ 15 ದಿನಗಳಲ್ಲಿ ಇದಕ್ಕೆ ಸ್ಪಷ್ಟವಾದ ಆದೇಶಬಿದ್ದು ಚಾಲನೆ ಸಿಗುವ ವಿಶ್ವಾಸವಿದೆ ಎಂದರು.

ಬ್ರಹ್ಮಕುಮಾರಿ ಈಶ್ವರೀಯ ವಿ.ವಿ. ರಾಜಯೋಗಿನಿ ಬ್ರಹ್ಮಾಕುಮಾರಿ ಅನುಸೂಯಾಜಿ, ಕೊಪ್ಪಳ ವಿಶ್ವವಿದ್ಯಾನಿಲಯದ ಕುಲಪತಿ ಪ್ರೊ;ಬಿ.ಕೆ.ರವಿ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯಾಧ್ಯಕ್ಷರಾದ ಶಿವಾನಂದ ತಗಡೂರು, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ದಿನೇಶ್ ಕೆ.ಶೆಟ್ಟಿ, ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಪ್ರಧಾನ ಕಾರ್ಯದರ್ಶಿ ಜಿ.ಸಿ.ಲೋಕೇಶ್, ವರದಿಗಾರರ ಕೂಟದ ಅಧ್ಯಕ್ಷರಾದ ನಾಗರಾಜ್ ಬಡದಾಳ್, ಪತ್ರಕರ್ತರಾದ ಬಿ.ಎನ್.ಮಲ್ಲೇಶ್, ವಾರ್ತಾಧಿಕಾರಿ ಧನಂಜಯ.ಬಿ ಹಾಗೂ ಇನ್ನಿತರರು ಉಪಸ್ಥಿತರಿದ್ದರು. ಜಿಲ್ಲಾಧ್ಯಕ್ಷರಾದ ಇ.ಎಂ.ಮಂಜುನಾಥ್ ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯದರ್ಶಿ ಫಕ್ರುದ್ದೀನ್ ಸ್ವಾಗತಿಸಿ ಶ್ರೀನಿವಾಸ್ ನಿರೂಪಿಸಿದರು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T